ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೫

# ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೈದನೆಯ ಅಧಿವೇಶನ

ಮಂಗಳವಾರ, ದಿನಾಂಕ : ೧೦ನೇ ಜುಲೈ, ೨೦೧೮

---

## ಸಮೂಹ – II

೧. ಉಪ ಮುಖ್ಯಮಂತ್ರಿಗಳು.

೨. ಲೋಕೋಪಯೋಗಿ ಸಚಿವರು.

೩. ಸಹಕಾರ ಸಚಿವರು.

೪. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ನಗರಾಭಿವೃದ್ಧಿ ಹಾಗೂ ವಸತಿ ಸಚಿವರು.

೬. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು.

---

## ಹೆದ್ದಾರಿಗಳ ನಿರ್ಮಾಣ ಹಾಗೂ ದುರಸ್ಥಿ ಬಗ್ಗೆ

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೬೯ (೫೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೦೪ ವರ್ಷಗಳಲ್ಲಿ ಎಷ್ಟು ಕಿ.ಮೀ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಮೇಜರ್ ಜಿಲ್ಲಾ ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ ಹಾಗೂ ಎಷ್ಟು ಕಿ.ಮೀ ರಸ್ತೆಗಳನ್ನು ದುರಸ್ಥಿ ಮಾಡಲಾಗಿದೆ ; (ವಿವರ ನೀಡುವುದು)

(ಆ) ಕಳೆದ ೦೪ ವರ್ಷಗಳಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಬಂದಿರುವ ಯೋಜನೆಗಳು ಯಾವುವು ; ಪ್ರತಿ ಯೋಜನೆಗಳ ಅನುದಾನ ಎಷ್ಟು ; (ಯೋಜನೆವಾರು ವಿವರ ನೀಡುವುದು) ಆ ಯೋಜನೆಗಳ ಕಾರ್ಯ ಯಾವ ಹಂತದಲ್ಲಿವೆ ? (ಸಂಪೂರ್ಣ ವಿವರ ನೀಡುವುದು)

## ರಾಜೀವ್ ಗಾಂಧಿ ವಸತಿ ನಿಗಮದ ಮನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦ (೧೬೨) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ ವಿಶೇಷ ವರ್ಗದಡಿ (ವಿಧವೆ/ವಿಕಲಚೇತನರ) ಮನೆ/ ನಿವೇಶನ ಒದಗಿಸಲು ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಆ) ಮಂಜೂರಾತಿಯಾಗಿರುವ ಹಾಗೂ ಮಂಜೂರಾತಿಗಾಗಿ ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವಾಗ ಮಂಜೂರು ಮಾಡಲಾಗುವುದು; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಇ) ವಿವಿಧ ಯೋಜನೆಗಳಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಫಲಾನುಭವಿಗಳ ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಮಂಜೂರಾದ ಮನೆಗಳಿಗೆ ಬಿಡುಗಡೆಯಾದ ಅನುದಾನ, ಖರ್ಚಾದ ಅನುದಾನ ಎಷ್ಟು ; ಬಾಕಿ ಉಳಿದ ಅನುದಾನ ಎಷ್ಟು ;

(ಉ) ಮಂಜೂರಾದ ಮನೆಗಳ ಪೈಕಿ ನಿರ್ಮಾಣ ಕಾರ್ಯ ಪ್ರಾರಂಭಗೊಂಡಿರುವ ನಿರ್ಮಾಣದ ವಿವಿಧ ಹಂತಗಳಲ್ಲಿರುವ ಮತ್ತು ಪ್ರಾರಂಭವಾಗದೇ ಇರುವ ಮನೆಗಳ ಸಂಖ್ಯೆ ಎಷ್ಟು; ನಿರ್ಮಾಣ ಕಾರ್ಯ ಪ್ರಾರಂಭವಾಗದಿರಲು ಕಾರಣವೇನು;

(ಊ) ಸುರಕ್ಷಿತವಾಗಿಲ್ಲದ ಮನೆಗಳು ಎಷ್ಟು; ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು; ಸದರಿ ಮನೆಗಳನ್ನು ಕಟ್ಟುವುದರಲ್ಲಿ ಆಗಿರುವ ಅಕ್ರಮಗಳಲ್ಲಿ ಭಾಗಿಯಾದ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಹೊಸ ಪಡಿತರ ಚೀಟಿಗಳ ವಿತರಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧ (೧೬೪೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಮೇ ಅಂತ್ಯದವರೆಗೆ ಹೊಸ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ; ಎಷ್ಟು ಅರ್ಜಿಗಳ ಪರಿಶೀಲನಾ ಕಾರ್ಯ ಪೂರ್ಣಗೊಂಡಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪೈಕಿ ಎಷ್ಟು ಅರ್ಜಿಗಳಿಗೆ ಪಡಿತರ ಕಾರ್ಡ್‌ಗಳನ್ನು ವಿತರಿಸಲಾಗಿದೆ ; (ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಪ್ರತ್ಯೇಕ ಜಿಲ್ಲಾವಾರು ವಿವರವನ್ನು ನೀಡುವುದು)

(ಇ) ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದವರಿಗೆ ೧೫ ದಿನದಲ್ಲಿ ಅಂಚೆ ಮೂಲಕ ಮನೆ ಬಾಗಿಲಿಗೆ ಪಡಿತರ ಚೀಟಿ ತಲುಪಿಸುವ ಕಾರ್ಯಕ್ರಮದಡಿ ಈವರೆಗೆ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಪಡಿತರ ಕಾರ್ಡ್‌ಗಾಗಿ ಅರ್ಜಿ ಸಲ್ಲಿಸಿರುವ ಎಲ್ಲರಿಗೂ ಯಾವಾಗ ಕಾರ್ಡ್‌ಗಳನ್ನು ವಿತರಿಸಲಾಗುವುದು ; ಇದಕ್ಕಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨ (೧೬೧) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಯೋಜನೆಗಳಡಿ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾಗಿರುವ ಮನೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೪ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳಲ್ಲಿ ಎಷ್ಟು ಮನೆಗಳ ಕಾಮಗಾರಿ ಪೂರ್ಣಗೊಂಡಿವೆ ; ಇದರಲ್ಲಿ ವಾಸಿಸಲು ಅರ್ಹವಾದ ಮನೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಅಪೂರ್ಣಗೊಂಡ ಮನೆಗಳ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಉ) ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣಕ್ಕೆ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾದ ಹಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಊ) ಮಂಡ್ಯ ಜಿಲ್ಲೆಯಲ್ಲಿ ಮನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮಗಳು ನಡೆದಿರುವ ಬಗ್ಗೆ ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ವಿವರ ನೀಡುವುದು?

## ಮದ್ದೂರು ತಾಲ್ಲೂಕು ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩ (೧೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮದ್ದೂರು ತಾಲ್ಲೂಕು, ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿರುವ ಒಟ್ಟು ಸದಸ್ಯರ ಸಂಖ್ಯೆ ಎಷ್ಟು ; (ಸದಸ್ಯರ ಹೆಸರು ಸದಸ್ಯತ್ವ ಸಂಖ್ಯೆ ಅವರ ಖಾತೆಯಲ್ಲಿರುವ ಷೇರು ಮೊತ್ತದ ವಿವರವನ್ನು ಒದಗಿಸುವುದು)

(ಆ) ಸದಸ್ಯರ ಷೇರು ಮೊತ್ತವನ್ನು ಅವರ ಖಾತೆಗಳಿಗೆ ಜಮಾ ಮಾಡುವಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಸಂಘದಲ್ಲಿ ಒಬ್ಬ ಸದಸ್ಯನಿಗೆ ಎಷ್ಟು ಬಾರಿ ಸಾಲ ನೀಡಬಹುದು; ಒಂದಕ್ಕಿಂತ ಹೆಚ್ಚು ಬಾರಿ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸದಸ್ಯರ ಷೇರು ಮೊತ್ತ ಮತ್ತು ಸಾಲ ನೀಡುವಲ್ಲಿ ಆಗಿರುವ ಅವ್ಯವಹಾರಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ;

(ಉ) ಸಂಘದಲ್ಲಿ ದಿನಾಂಕ ೩೧–೦೩–೨೦೧೬ಕ್ಕೆ ಮೊದಲು ತಗಾದೆಗೆ ಬಂದಂತಹ ಬೆಳೆ ಸಾಲದ ಪೈಕಿ ಸಾಮಾನ್ಯ ಬಡ್ಡಿ ದರದಲ್ಲಿ ರೈತ ಸದಸ್ಯರಿಂದ ವಸೂಲಿ ಮಾಡಲಾದ ಹಣವನ್ನು ಯಾವ ಖಾತೆಗೆ ಯಾವಾಗ ಜಮಾ ಮಾಡಲಾಗಿದೆ ? (ವಿವರ ನೀಡುವುದು)

## ಪೊಲೀಸ್ ಠಾಣೆಗಳಲ್ಲಿ ದೂರುಗಳ ಬಗ್ಗೆ ಕೈಗೊಳ್ಳುವ ಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪ (೧೪೭) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಠಾಣೆಗಳಿಗೆ ಸಾರ್ವಜನಿಕರು ದೂರು ನೀಡಿದ ನಂತರ ಠಾಣಾಧಿಕಾರಿಗಳು ಕೈಗೊಳ್ಳುವ ಕ್ರಮಗಳಾವುವು ;

(ಆ) ದೂರಿನ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ದೂರುದಾರರಿಗೆ ಮಾಹಿತಿ ನೀಡುವ ವ್ಯವಸ್ಥೆ ಇದೆಯೇ ; ಎಷ್ಟು ದಿವಸಗಳಲ್ಲಿ ಯಾವ ರೀತಿ ಮಾಹಿತಿ ನೀಡಲಾಗುತ್ತದೆ ; ಇಲ್ಲದಿದ್ದಲ್ಲಿ ಇನ್ನೂ ಮುಂದೆ ಮಾಹಿತಿ ನೀಡಲಾಗುವುದೆ ;

(ಇ) ಸಾರ್ವಜನಿಕರು ನೀಡಿರುವ ದೂರುಗಳ ಬಗ್ಗೆ ಠಾಣಾಧಿಕಾರಿಗಳು ಕೈಗೊಂಡ ಕ್ರಮದ ಬಗ್ಗೆ ಮೇಲಾಧಿಕಾರಿಗಳು ತಪಾಸಣೆ ಮಾಡುತ್ತಾರೆಯೇ ; ಯಾವ ರೀತಿಯ ಕ್ರಮ ಅನುಸರಿಸಲಾಗುತ್ತಿದೆ ? (ವಿವರಗಳನ್ನು ನೀಡುವುದು)

## ಬೆಂಗಳೂರು ನಗರದಲ್ಲಿರುವ ಅಂಡರ್‌ಪಾಸ್‌ಗಳ ದುಸ್ಥಿತಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫ (೧೪೮) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಅನೇಕ ಕಡೆಗಳಲ್ಲಿ ಸುರಂಗ ಮಾರ್ಗಗಳನ್ನು ನಿರ್ಮಿಸಿದ್ದು, ಅದು ಸಾರ್ವಜನಿಕರ ಉಪಯೋಗಕ್ಕೆ ಬಾರದಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಎಷ್ಟು ಸುರಂಗ ಮಾರ್ಗಗಳು ನಿರುಪಯುಕ್ತವಾಗಿವೆ ; ಈ ಸ್ಥಿತಿಗೆ ಬರಲು ಕಾರಣವೇನು ; ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿರುವ ಅಂಡರ್‌ಪಾಸ್‌ಗಳು ಸಾರ್ವಜನಿಕರ ಉಪಯೋಗಕ್ಕೆ ಬಾರದಂತೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಇ) ಇವುಗಳನ್ನು ಶುಚಿಗೊಳಿಸಿ ಸಾರ್ವಜನಿಕರಿಗೆ ಉಪಯೋಗವಾಗುವಂತೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ; ಎಷ್ಟು ದಿವಸಗಳಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು ?

## ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬ (೧೪೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಲೋಕೋಪಯೋಗಿ ಇಲಾಖೆಗೆ ಬಿಡುಗಡೆಯಾದ ಅನುದಾನವೆಷ್ಟು;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಎಷ್ಟು ಖರ್ಚಾಗಿದೆ ;

(ಇ) ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಂಡು ಪೂರ್ಣಗೊಳಿಸಲಾಗಿದೆ ; ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ; ಎಷ್ಟು ಹಣ ಖರ್ಚು ಮಾಡಲಾಗಿದೆ ?

## ಕ್ರೀಡಾಂಗಣಗಳ ಅಭಿವೃದ್ಧಿ ಕುರಿತು

**ಶ್ರೀ ಎಂ. ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭ (೧೫೦) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅನುಷ್ಠಾನಗೊಳುತ್ತಿರುವ ಕಾರ್ಯಕ್ರಮಗಳ ಪೂರ್ಣ ವಿವರ ನೀಡುವುದು ; ಈ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು ; (ತಾಲ್ಲೂಕುವಾರು ಮತ್ತು ಫಲಾನುಭವಿವಾರು ವಿವರ ನೀಡುವುದು)

(ಆ) ಹಾಸನ ಜಿಲ್ಲೆಯುಲ್ಲಿರುವ ಹೋಬಳಿ/ತಾಲ್ಲೂಕು/ಜಿಲ್ಲಾ ಕ್ರೀಡಾಂಗಣಗಳ ಪೂರ್ಣ ಮಾಹಿತಿ ನೀಡುವುದು ; ಈ ಕ್ರೀಡಾಂಗಣಗಳ ಅಭಿವೃದ್ಧಿಗಾಗಿ ಇಲಾಖೆಯು ಕೈಗೊಂಡಿರುವ ಕ್ರಮಗಳೇನು; (ಪೂರ್ಣ ಮಾಹಿತಿ ನೀಡುವುದು)

(ಇ) ಚನ್ನರಾಯಪಟ್ಟಣ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾದ ಮೊತ್ತವೆಷ್ಟು ; ಮತ್ತು ಈ ಕ್ರೀಡಾಂಗಣದ ಕಾಮಗಾರಿಗಳು ಯಾವ ಹಂತದಲ್ಲಿದೆ ; ಹಾಗೂ ಈ ಕ್ರೀಡಾಂಗಣವು ಕ್ರೀಡಾಪಟುಗಳ ಉಪಯೋಗಕ್ಕೆ ಯಾವಾಗ ಲಭ್ಯವಾಗುತ್ತವೆ ?

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮ (೧೫೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ವ್ಯವಸಾಯ ಸೇವಾ ಸಹಕಾರ ಸಂಘಗಳು ರೈತರಿಗೆ ಸಾಲ ನೀಡಲು ರೂಪಿಸಿರುವ ಮಾನದಂಡಗಳೇನು ; ಈ ಮಾನದಂಡಗಳನ್ನು ಸಂಘಗಳು ಪಾಲಿಸುತ್ತಿವೆಯೇ ಎಂದು ದೃಢೀಕರಿಸಿಕೊಳ್ಳಲು ಸರ್ಕಾರವು ಅನುಸರಿಸುತ್ತಿರುವ ಮಾರ್ಗಸೂಚಿಗಳ ವಿವರ ನೀಡುವುದು ;

(ಆ) ಹಾಸನ ಜಿಲ್ಲೆಯಲ್ಲಿ ಈ ಸಹಕಾರಿ ಸಂಘಗಳು ಸರ್ಕಾರದ ನಿಯಮಾನುಸಾರ ಸಾಲ ವಿತರಣೆ ಮಾಡುತ್ತಿಲ್ಲವೆಂಬ ದೂರುಗಳು ಸ್ವೀಕೃತವಾಗಿವೆಯೇ ; (ವಿವರ ನೀಡುವುದು) ದೂರುಗಳು

ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ತಾಲ್ಲೂಕುವಾರು / ಸಂಘವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಈ ಸಂಘಗಳು ರೈತರಿಗೆ ನೀಡಿರುವ ಸಾಲದ ಮೊತ್ತವೆಷ್ಟು; (ತಾಲ್ಲೂಕುವಾರು / ಸಂಘವಾರು / ಫಲಾನುಭವಿಗಳವಾರು ಮಾಹಿತಿಯನ್ನು ನೀಡುವುದು)

(ಈ) ಚನ್ನರಾಯಪಟ್ಟಣ ತಾಲ್ಲೂಕಿನ ಕಬ್ಬಳಿ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಹಾಸನ ಡಿ.ಸಿ.ಸಿ. ಬ್ಯಾಂಕ್‌ನಿಂದ ಸಾಲ ಮಂಜೂರಾಗದಿರುವುದು ಹಾಗೂ ಇತರೆ ಕೆಲವು ಸಂಘಗಳು ಸದಸ್ಯತ್ವ ನೋಂದಣಿಯನ್ನು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸಮಸ್ಯೆ ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಪಡಿತರ ಚೀಟಿ ವಿತರಣೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೯ (೧೫೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪಡಿತರ ಚೀಟಿಗಳನ್ನು ನಿಯಮಿತವಾಗಿ ವಿತರಣೆ ಮಾಡದಿರುವುದರಿಂದ ಹಾಗೂ ವ್ಯವಸ್ಥಿತವಾಗಿ ಬಯೋ-ಮೆಟ್ರಿಕ್ ತಂತ್ರಾಂಶವನ್ನು ಅಳವಡಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇದರಿಂದಾಗಿ ಅರ್ಹ ಫಲಾನುಭವಿಗಳಿಗೆ ಪಡಿತರ, ಆಸ್ಪತ್ರೆಗಳಲ್ಲಿ ಚಿಕಿತ್ಸೆ ಮುಂತಾದ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಅರ್ಹ ಫಲಾನುಭವಿಗಳಿಗೆ ಹೊಸದಾಗಿ ಪಡಿತರ ಚೀಟಿಗಳನ್ನು ವಿತರಣೆ ಮಾಡಲು ಸರ್ಕಾರ ಕಾಲಮಿತಿಯೇನಾದರೂ ನಿಗದಿಪಡಿಸಿದೆಯೇ ; ಹಾಗಿದ್ದಲ್ಲಿ, ಯಾವಾಗ ವಿತರಣೆ ಮಾಡಲಾಗುವುದು ;

(ಇ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಬಿ.ಪಿ.ಎಲ್. ಎ.ಪಿ.ಎಲ್. ಹಾಗೂ ಅಂತ್ಯೋದಯ ಪಡಿತರ ಚೀಟಿಗಳಿಗೆ ಅರ್ಜಿ ಸಲ್ಲಿಸಿದ್ದವರ ಸಂಖ್ಯೆ ಎಷ್ಟು; ಪಡಿತರ ಚೀಟಿಗಳನ್ನು ವಿತರಣೆ ಮಾಡಲು ಸ್ಥಳ ತನಿಖೆ ಮಾಡಲಾಗಿದೆಯೇ ; ಮಾಡದಿದ್ದಲ್ಲಿ, ಕಾರಣಗಳೇನು ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦ (೧೫೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಕಟ್ಟಡಗಳು, ಸಾರ್ವಜನಿಕರ ಉಪಯೋಗಕ್ಕೆ ಬಾರದೇ ಹಾಳಾಗಿರುವ ರಸ್ತೆಗಳು ಹಾಗೂ ಕಟ್ಟಡಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಆ) ಹಾಸನ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಹಾಗೂ ಕಟ್ಟಡಗಳ ನಿರ್ಮಾಣ /

ನವೀಕರಣ / ದುರಸ್ತಿಗಾಗಿ ಕಳೆದ ೩ ವರ್ಷಗಳಲ್ಲಿ ಸರ್ಕಾರವು ಖರ್ಚು ಮಾಡಿರುವ ಹಣವೆಷ್ಟು ; (ಕಾಮಗಾರಿಯ ಸಂಪೂರ್ಣ ಮಾಹಿತಿ ನೀಡುವುದು)

(ಇ) ಮೇಲ್ಕಂಡ ಕಾಮಗಾರಿಗಳ ಹೊರತಾಗಿ ಹಾಸನ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕಳೆದ ೩ ವರ್ಷಗಳಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ವಿವರ ಹಾಗೂ ಈ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರವು ಖರ್ಚು ಮಾಡಿರುವ ಹಣವೆಷ್ಟು ? (ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ಆಶ್ರಯ ಯೋಜನೆಯಡಿ ನಿವೇಶನಗಳ ಹಂಚಿಕೆ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧ (೧೫೪) ಮಾನ್ಯ ನಗರಾಭಿವೃದ್ಧಿ ಮತ್ತು ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಿಂದ ಆಶ್ರಯ ಯೋಜನೆಯಡಿ ನಿವೇಶನಗಳನ್ನು ಹಂಚಿಕೆ ಮಾಡಲು ಎಷ್ಟು ಗ್ರಾಮಗಳಲ್ಲಿ ಜಮೀನುಗಳನ್ನು ಗುರುತಿಸಲಾಗಿದೆ ; ಸದರಿ ಜಮೀನುಗಳಿಗೆ ಸರ್ಕಾರವು ನಿಗದಿಪಡಿಸಿರುವ ಮೌಲ್ಯವೆಷ್ಟು ; (ತಾಲ್ಲೂಕವಾರು ಮಾಹಿತಿ ನೀಡುವುದು)

(ಆ) ಗುರುತಿಸಿರುವ ಜಮೀನುಗಳ ವಿಸ್ತೀರ್ಣದೊಂದಿಗೆ ಗ್ರಾಮವಾರು ವಿವರ ನೀಡುವುದು ;

(ಇ) ನಿವೇಶನ ಹಂಚಿಕೆಗಾಗಿ ವಸತಿರಹಿತರನ್ನು ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ, ವಸತಿ ರಹಿತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು / ಗ್ರಾಮವಾರು ವಿವರ ನೀಡುವುದು)

(ಈ) ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತು ಕಾಲಮಿತಿಯೇನಾದರೂ ವಿಧಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹಂಚಿಕೆ ಮಾಡಲಾಗುವುದು ; ನಿವೇಶನ ಹಂಚಿಕೆ ಮಾಡಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ?

## ಬೆಂಗಳೂರು ನಗರದಲ್ಲಿ ಸಂಪೂರ್ಣ ಪ್ಲಾಸ್ಟಿಕ್ ನಿಷೇಧ ಮಾಡುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೨ (೧೧೦) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರದಲ್ಲಿ ತ್ಯಾಜ್ಯಗಳ ಉತ್ಪತ್ತಿ ಹೆಚ್ಚಾಗಿರುವ ಕಾರಣ ಬಿ.ಬಿ.ಎಂ.ಪಿ. ವ್ಯಾಪ್ತಿಗೆ ಒಳಪಟ್ಟು ಸಂಪೂರ್ಣ ಪ್ಲಾಸ್ಟಿಕ್ ನಿಷೇಧ ಮಾಡಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ ;

(ಆ) ಬೆಂಗಳೂರು ನಗರದ ಕಸವಿಲೇವಾರಿಗೆ ಎಷ್ಟು ಘಟಕಗಳು ಕಾರ್ಯ ನಿರ್ವಹಿಸುತ್ತಿವೆ ;

(ಇ) ಕಸ ವಿಲೇವಾರಿ ಘಟಕಗಳ ಸಂಖ್ಯೆಯನ್ನು ಹೆಚ್ಚು ಮಾಡಿ ಶೀಘ್ರ ಕಸವಿಲೇವಾರಿಗೆ ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೩ (೧೦೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯು ರಾಜ್ಯದ ವಿವಿಧ ರಸ್ತೆ ಅಭಿವೃದ್ಧಿಗೆ ವಿನಿಯೋಗಿಸಿದ ಅನುದಾನ ಎಷ್ಟು; (ಜಿಲ್ಲಾವಾರು, ವರ್ಷಾವಾರು, ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಚಾರ್ಮಾಡಿ ರಸ್ತೆಯಲ್ಲಿ ಪದೇ ಪದೇ ಉದ್ಭವಿಸುತ್ತಿರುವ ಅವ್ಯವಸ್ಥೆಗಳಿಂದ ವಾಹನಗಳ ಓಡಾಟಕ್ಕೆ ಆಗುತ್ತಿರುವ ತೊಂದರೆ ನಿವಾರಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ದೀರ್ಘಾವಧಿ ಯೋಜನೆಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನಗಳ ಹಂಚಿಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೪ (೧೩೬) ಮಾನ್ಯ ನಗರಾಭಿವೃದ್ಧಿ ಮತ್ತು ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನಗಳನ್ನು ರಚಿಸಲು ಖರೀದಿಸಲಾದ ಭೂಮಿಯಲ್ಲಿ ಅವ್ಯವಹಾರಗಳಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಏಲೇ ಹಣವನ್ನು ವಿನಿಯೋಗಿಸಲಾಗಿದೆಯೇ ; ಯಾವ ವರ್ಷದಲ್ಲಿ ಭೂಮಿ ಖರೀದಿಸಲಾಗಿದೆ ನಿವೇಶನಗಳನ್ನು ವಿತರಿಸದೇ ಇರಲು ಕಾರಣಗಳೇನು ; ಪ್ರಾಧಿಕಾರಕ್ಕೆ ಆಗಿರುವ ನಷ್ಟ ಎಷ್ಟು; (ವಿವರ ನೀಡುವುದು)

(ಆ) ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಭೂಮಾಲೀಕರಿಗೆ ಹಣ ನೀಡದರೂ ಭೂಮಿಯನ್ನು ನೋಂದಾಯಿಸಿಕೊಳ್ಳದೆ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಉಂಟಾಗಿದ್ದು ಈ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಎಷ್ಟು ಅರ್ಹರಿಗೆ ನಿವೇಶನಗಳನ್ನು ಹಂಚಲಾಗಿದೆ ; ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಚಟುವಟಿಕೆಗಳಿಲ್ಲದೆ ನಿಷ್ಕ್ರೀಯಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ೨೦೧೬–೧೭ ಮತ್ತು ೨೦೧೭–೧೮ರಲ್ಲಿ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳಾವುವು ; ಇದಕ್ಕೆ ತಗಲಿದ ಮೊತ್ತ ಎಷ್ಟು ; ಸರ್ಕಾರದಿಂದ ದೊರೆತ ಹಣ ಎಷ್ಟು ; (ವಿವರ ನೀಡುವುದು)

(ಉ) ಅವ್ಯವಹಾರದ ಬಗ್ಗೆ ಸರ್ಕಾರ ತನಿಖೆಗೆ ಆದೇಶ ನೀಡಲಾಗಿದೆಯೇ ; ಸಂಬಂಧಪಟ್ಟವರನ್ನು ಅಮಾನತು ಮಾಡಲಾಗುವುದೇ ?

## ಮಂಗಳೂರು ನಗರದಲ್ಲಿ ಸ್ಮಾರ್ಟ್ ಸಿಟಿ ಪ್ರೊಪೋಸಲ್ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೫ (೧೩೭) ಮಾನ್ಯ ನಗರಾಭಿವೃದ್ಧಿ ಮತ್ತು ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಲ್ಲಿ ಸ್ಮಾರ್ಟ್ ಸಿಟಿ ಪ್ರೊಪೋಸಲ್‌ನಲ್ಲಿ ಯಾವ ಯಾವ ಕಾಮಗಾರಿಕೆಗಳನ್ನು ಅಳವಡಿಸಿ ಕ್ರಿಯಾ ಯೋಜನೆ ತಯಾರಿಸಲು ಕ್ರಮ ಕೈಗೊಳ್ಳಲಾಗಿದೆ ;

(ಆ) ಮೊದಲನೇ ವರ್ಷಕ್ಕೆ ನಗರದ ಯಾವ ಯಾವ ಸ್ಥಳಗಳನ್ನು ಸ್ಮಾರ್ಟ್ ಸಿಟಿ ಮಿಶನ್ ಅಡಿ ಆಯ್ಕೆ ಮಾಡಲಾಗಿದೆ ; ಹಾಗೂ ಈ ಆಯ್ಕೆ ಪ್ರಕ್ರಿಯೆಯನ್ನು ಯಾವ ಆಧಾರದ ಮೇಲೆ ಮಾಡಲಾಗಿದೆ ;

(ಇ) ಸ್ಮಾರ್ಟ್ ಸಿಟಿ ಸಮಿತಿಯಲ್ಲಿ ನಗರ ಪ್ರದೇಶ ವ್ಯಾಪ್ತಿಗೆ ಬರುವ ವಿಧಾನ ಪರಿಷತ್ ಸದಸ್ಯರನ್ನು ಸಮಿತಿ ಸದಸ್ಯರ ಪಟ್ಟಿಯಲ್ಲಿ ಸೇರಿಸದ ಹಾಗೆ ಸಮಿತಿ ಸದಸ್ಯರಾಗಿ ಆಯ್ಕೆ ಮಾಡದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ನಗರಪಾಲಿಕೆ ಆಯುಕ್ತರನ್ನು ಇದರ ಮ್ಯಾನೆಜಿಂಗ್ ಡೈರೆಕ್ಟರಾಗಿ ನೇಮಕ ಮಾಡಿರುವುದರಿಂದ ನಗರಪಾಲಿಕೆ ಮತ್ತು ಕಂಪನಿಗಳಲ್ಲಿ ಕೆಲಸದ ಒತ್ತಡದಿಂದ ಸ್ಮಾರ್ಟ್ ಸಿಟಿ ಯೋಜನೆ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬದಲಾವಣೆ ಮಾಡುವ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಉ) ಸ್ಮಾರ್ಟ್ ಸಿಟಿ ಯೋಜನೆಯು ಕಂಪನಿಗೆ ಎಷ್ಟು ಹಣ ವ್ಯಯ ಮಾಡಲು ಅನುಮತಿ ನೀಡಲಾಗಿದೆ ? (ವಿವರ ನೀಡುವುದು)

## ಅಂತರಜಾಲ ಮುಖಾಂತರ ಖರೀದಿಸುವ ವಸ್ತುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೬ (೧೩೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂತರಜಾಲ ಮುಖಾಂತರ ಖರೀದಿಸುವ ವಸ್ತುಗಳಲ್ಲಿ ಗ್ರಾಹಕರಿಗೆ ಮೋಸ ಆಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಇದುವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ವಿಧಿಸಿದ ದಂಡ ಎಷ್ಟು ; (ವಿವರ ನೀಡುವುದು)

(ಆ) ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಹಕರ ವೇದಿಕೆಯಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; ಇತ್ಯರ್ಥಗೊಂಡ ಪ್ರಕರಣಗಳೆಷ್ಟು ;

(ಇ) ದಕ್ಷಿಣ ಕನ್ನಡ ಜಿಲ್ಲೆಗೆ ಹೆಚ್ಚುವರಿ ಗ್ರಾಹಕರ ನ್ಯಾಯಾಲಯ ನೀಡುವುದಾಗಿ ಸರ್ಕಾರ ಭರವಸೆ ನೀಡಿದ್ದು, ಇದು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಗ್ರಾಹಕರ ಕಾಯ್ದೆ ಮತ್ತು ಹಕ್ಕುಗಳ ಬಗ್ಗೆ ಮಾಹಿತಿ ಕೊರತೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು) ಮಾಲ್ ಮತ್ತು ಸ್ಟೋರ್‌ಗಳಲ್ಲಿ ಗ್ರಾಹಕರ ಹಕ್ಕುಗಳ ಬಗ್ಗೆ ಮಾಹಿತಿ ಫಲಕಗಳನ್ನು ಪ್ರದರ್ಶಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಗ್ರಾಹಕರಿಗೆ ಮೋಸ ಆಗುವುದನ್ನು ತಡೆಯಲು ಎಲ್ಲಾ ಮಾಲ್‌ಗಳಲ್ಲಿ ಮಾಹಿತಿ ಕೇಂದ್ರ ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬಹುಮಹಡಿ ಕಟ್ಟಡಗಳ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೮೭ (೧೭೫) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬಹುಮಹಡಿ ಕಟ್ಟಡಗಳ ಸಂಖ್ಯೆ ಎಷ್ಟು ; (ಜಿ+೧ ಗಿಂತ ಹೆಚ್ಚಿನ ವಾಣಿಜ್ಯ ಮತ್ತು ವಾಸ್ತವ್ಯ ಮಹಡಿ ಮತ್ತು ವಾರ್ಡ್‌ವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಬಹುಮಹಡಿ ಕಟ್ಟಡ ನಿರ್ಮಾಣದ ಸಂದರ್ಭದಲ್ಲಿ ನಡೆದ ಅವಘಡಗಳ ಸಂಖ್ಯೆ ಎಷ್ಟು; ವಿವರ ಒದಗಿಸುವುದು ; ನಿರ್ಲಕ್ಷತರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಬಹುಮಹಡಿ ಕಟ್ಟಡಗಳಿಗೆ ಆಗಮಿಸುವ ಸಾರ್ವಜನಿಕರ ವಾಹನಗಳ ಪಾರ್ಕಿಂಗ್, ಅಗತ್ಯ ಸಂಖ್ಯೆಯ ಶೌಚಾಲಯದ ಲಭ್ಯತೆ ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಬಹುಮಹಡಿ ವಾಣಿಜ್ಯ ಕಟ್ಟಡಗಳಲ್ಲಿ ಸಾರ್ವಜನಿಕರಿಗೆ ಶೌಚಾಲಯ, ವಾಹನಗಳ ಪಾರ್ಕಿಂಗ್‌ಗಳಿಗೆ ಅಗತ್ಯ ಸ್ಥಳಾವಕಾಶ ಮತ್ತು ಸಾರ್ವಜನಿಕರ ಸುರಕ್ಷತೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ಅತಿಹೆಚ್ಚು ಮಳೆಯಿಂದಾಗಿ ರಸ್ತೆ ಹಾಳಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೮ (೧೫೯) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅತೀ ಹೆಚ್ಚು ಮಳೆ ಬೀಳುವ ಸಂದರ್ಭದಲ್ಲಿ ಬೆಂಗಳೂರು ನಗರದ ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅನುದಾನದ ಕೊರತೆಯಿಂದಾಗಿ ಸಮರ್ಪಕವಾದ ನಿರ್ವಹಣೆ ಮತ್ತು ದುರಸ್ಥಿ ಕಾಮಗಾರಿಗಳ ವಿಳಂಬದಿಂದಾಗಿ ವಾಹನಗಳ ಸಂಚಾರಕ್ಕೆ ಅಡಚಣೆಯಾಗುತ್ತಿರುವುದು ನಿಜವೇ ;

(ಇ) ೨೦೧೭–೧೮ನೇ ಸಾಲಿನಲ್ಲಿ ಬೆಂಗಳೂರು ನಗರದ ರಸ್ತೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಖರ್ಚಾದ ಮತ್ತು ಖರ್ಚಾಗದೇ ಉಳಿದಿರುವ ಹಣವೆಷ್ಟು ; ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ಕಾಮಗಾರಿವಾರು ಸಂಪೂರ್ಣ ದಾಖಲೆಯೊಂದಿಗೆ ವಿವರ ನೀಡುವುದು)

(ಈ) ರಸ್ತೆ ದುರಸ್ಥಿಗಳಿಗಾಗಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಬೆಂಗಳೂರು ನಗರದಲ್ಲಿ ಫ್ಲೆಕ್ಸ್ ಹಾವಳಿ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೯ (೧೬೦) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರವನ್ನು ಪ್ಲಾಸ್ಟಿಕ್ ಮತ್ತು ಫ್ಲೆಕ್ಸ್ ಮುಕ್ತ ನಗರವನ್ನಾಗಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಬೆಂಗಳೂರು ನಗರದಲ್ಲಿ ಫ್ಲೆಕ್ಸ್‌ಗಳ ಹಾವಳಿ ನಿರಂತರವಾಗಿರುವುದರಿಂದ ರಾಜಕೀಯ ಪಕ್ಷಗಳ, ಹುಟ್ಟು ಹಬ್ಬದ ಮತ್ತು ಶ್ರದ್ಧಾಂಜಲಿಗಳ ಭಾವಚಿತ್ರಗಳು ಇಡೀ ಬೆಂಗಳೂರನ್ನು ಆಕ್ರಮಿಸಿರುವುದರಿಂದ ಫ್ಲೆಕ್ಸ್ ಮುಕ್ತ ಬೆಂಗಳೂರು ಮಾಡಲು ಸರ್ಕಾರದ ಮುಂದಿರುವ ಕಾರ್ಯಕ್ರಮವೇನು ;

(ಇ) ನಿಯಮಗಳನ್ನು ಉಲ್ಲಂಘಿಸಿರುವ ರಾಜಕೀಯ ಪಕ್ಷಗಳನ್ನು ಒಳಗೊಂಡಂತೆ ವೈಯಕ್ತಿಕ, ಸಂಘ ಸಂಸ್ಥೆಗಳ ಫ್ಲೆಕ್ಸ್ ಹಾವಳಿ ತಡೆಗಟ್ಟಲು ಸರ್ಕಾರ ಅನುಸರಿಸುತ್ತಿರುವ ಮಾರ್ಗಸೂಚಿಗಳು ಮತ್ತು ಮುಂಜಾಗ್ರತಾ ಕ್ರಮಗಳೇನು ?

## ತ್ಯಾಗರಾಜ್ ಸಮಿತಿ ವರದಿಯಂತೆ ಲಿಂಗನಮಕ್ಕಿ ಜಲಾಶಯದಿಂದ ಕುಡಿಯುವ ನೀರು ತರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೦ (೪೨) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತ್ಯಾಗರಾಜ್ ಸಮಿತಿ ನೀಡಿರುವ ವರದಿಯಂತೆ ಲಿಂಗನಮಕ್ಕಿ ಜಲಾಶಯದಿಂದ ಬೆಂಗಳೂರು ಮಹಾನಗರಕ್ಕೆ ಕುಡಿಯುವ ನೀರನ್ನು ಕೊಂಡೊಯ್ಯುವಾಗ ಮಾರ್ಗ ಮಧ್ಯದಲ್ಲಿ ಯಾವ ಯಾವ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸಲಾಗುವುದು ; (ವರದಿಯ ಪ್ರತಿಯನ್ನು ಒದಗಿಸುವುದು)

(ಆ) ಲಿಂಗನಮಕ್ಕಿ ಜಲಾಶಯದಿಂದ ಕುಡಿಯುವ ನೀರನ್ನು ಕೊಂಡೊಯ್ಯುವ ಯೋಜನೆಯ ವಿಸ್ತೃತ ಯೋಜನಾ ವರದಿ (DPR) ಯನ್ನು ಪೂರ್ಣಗೊಳಿಸುವುದು ಯಾವಾಗ ಮತ್ತು ಈ ಯೋಜನೆಗೆ ತಗಲುವ ಅಂದಾಜು ಮೊತ್ತವೆಷ್ಟು ; ಯಾವಾಗ ಪೂರೈಸಲಾಗುವುದು ;

(ಇ) ಲಿಂಗನಮಕ್ಕಿ ಜಲಾಶಯದಿಂದ ಕುಡಿಯುವ ನೀರನ್ನು ಬೇರೆ, ಬೇರೆ ಜಿಲ್ಲೆಗಳಿಗೆ ಪೂರೈಸುವ ಯೋಜನೆಗೆ ಸಾರ್ವಜನಿಕರಿಂದ ಹಾಗೂ ಸಂಘ ಸಂಸ್ಥೆಗಳಿಂದ ವಿರೋಧ ಅಥವಾ ಆಕ್ಷೇಪಗಳು ಬಂದಿದೆಯೇ ; ಬಂದಿದ್ದಲ್ಲಿ, ಅವು ಯಾವುವು ?

## ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಗೆ ರಿಂಗ್‌ರಸ್ತೆ ನಿರ್ಮಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೧ (೪೧) ಮಾನ್ಯ ಪೌರಾಡಳಿತ, ಸ್ಥಳಿಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಯು ಮೂರು ಕಡೆಗಳಲ್ಲಿ ನೀರಿನಿಂದ ಆವೃತವಾಗಿರುವುದರಿಂದ ಭೂಪ್ರದೇಶ ಕಿರಿದಾಗಿದ್ದು, ಪಟ್ಟಣದ ಒಳಗಡೆಯ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸಲು ರಿಂಗ್ ರಸ್ತೆಯನ್ನು ನಿರ್ಮಿಸುವ ಯೋಜನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇಲ್ಲವಾದಲ್ಲಿ, ಕಾರಣಗಳೇನು ;

(ಆ) ಕುಂದಾಪುರ ಪುರಸಭೆಗೆ ರಿಂಗ್‌ರಸ್ತೆ ನಿರ್ಮಾಣಕ್ಕೆ ಯೋಜನೆ ಹಾಗೂ ಅಂದಾಜು ಮೊತ್ತವೆಷ್ಟು ;

(ಇ) ಈ ವೆಚ್ಚವನ್ನು ಯಾವ ಶೀರ್ಷಿಕೆಯಡಿ ಭರಿಸಲಾಗುವುದು ? (ಯೋಜನೆಯ ಪ್ರತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿಪತ್ತಿನ ಸಹಕಾರ ಸಂಘಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨ (೪೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿಪತ್ತಿನ ಸಹಕಾರ ಸಂಘಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಹಿಂದಿನ ಸರ್ಕಾರ ಮಾಡಿದ ರೂ ೫೦,೦೦೦/– ವರೆಗಿನ ಸಾಲಮನ್ನಾದ ಪ್ರಯೋಜನ ಪಡೆದ ರೈತರ ಸಂಖ್ಯೆ ಎಷ್ಟು; ಮತ್ತು ಇವರುಗಳು ಪಡೆದ ಸಾಲಮನ್ನಾದ ಒಟ್ಟು ಮೊತ್ತವೆಷ್ಟು ; ಸಾಲ ಪಡೆದುಕೊಂಡು ಸಾಲ ಮನ್ನಾದ ಪ್ರಯೋಜನ ಪಡೆಯದ ರೈತರುಗಳ ಸಂಖ್ಯೆ ಎಷ್ಟು; ಮನ್ನವಾಗದ ಸಾಲದ ಮೊತ್ತವೆಷ್ಟು ; ಈ ರೈತರುಗಳು ಸಾಲಮನ್ನಾದ ಪ್ರಯೋಜನದಿಂದ ವಂಚಿತರಾಗಲು ಕಾರಣವೇನು ? (ತಾಲ್ಲೂಕುವಾರು ವಿವರ ನೀಡುವುದು)

## ಹಿಂದಿನ ಸರ್ಕಾರದ ಅವಧಿಯಲ್ಲಿ ಮಂಜೂರಾದ ಸೇತುವೆಗಳ ಕುರಿತು

**ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩ (೩೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದಿನ ಸರ್ಕಾರದ ಅವಧಿಯಲ್ಲಿ ಕೇಂದ್ರ ರಸ್ತೆ ನಿಧಿ (CRF) ಹಾಗೂ ಲೋಕೋಪಯೋಗಿ ಇಲಾಖಾ ಅನುದಾನದಡಿಯಲ್ಲಿ ಉಡುಪಿ ಜಿಲ್ಲೆಗೆ ಮಂಜೂರಾಗಿರುವ ಸೇತುವೆಗಳ ಸಂಖ್ಯೆ ಎಷ್ಟು; ಮತ್ತು ಈ ಸೇತುವೆಗಳ ನಿರ್ಮಾಣಕ್ಕೆ ಮಂಜೂರಾಗಿರುವ ಅಂದಾಜು ಮೊತ್ತವೆಷ್ಟು ; (ಸೇತುವೆವಾರು ವಿವರ ನೀಡುವುದು)

(ಆ) ಹಿಂದಿನ ಸರ್ಕಾರದ ಅವಧಿಯಲ್ಲಿ ಉಡುಪಿ ಜಿಲ್ಲೆಯಲ್ಲಿ ಕೇಂದ್ರ ರಸ್ತೆ ನಿಧಿ (CRF) ಹಾಗೂ ಲೋಕೋಪಯೋಗಿ ಇಲಾಖಾ ಅನುದಾನದಡಿಯಲ್ಲಿ ಮಂಜೂರಾದ ಸೇತುವೆಗಳಲ್ಲಿ ಟೆಂಡರ್ ಪ್ರಕ್ರಿಯೆ ಮುಗಿದು ಇಲಾಖಾ ಅನುಮತಿಯನ್ನು ಪಡೆದುಕೊಂಡು ಕಾಮಗಾರಿ ಪ್ರಾರಂಭಗೊಂಡಿರುವವುಗಳು ಯಾವುವು ; ಮತ್ತು ಟೆಂಡರ್ ಪ್ರಕ್ರಿಯೆ ಮುಗಿದು ಇಲ್ಲಿಯ ತನಕ ಕಾಮಗಾರಿ ಆರಂಭವಾಗದೆ ಇರುವ ಸೇತುವೆಗಳು ಯಾವುವು ; ಮತ್ತು ಟೆಂಡರ್ ಪ್ರಕ್ರಿಯೆ ಮುಗಿದ ಕಾಮಗಾರಿಗಳಲ್ಲಿ ಇಲ್ಲಿಯ ತನಕ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣವೇನು ; ಮತ್ತು ಶೀಘ್ರ ಕಾಮಗಾರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; (ಸೇತುವೆವಾರು ವಿವರ ನೀಡುವುದು)

(ಇ) ಈ ಮಳೆಗಾಲದ ಆರಂಭದಿಂದ ಉಡುಪಿ ಜಿಲ್ಲೆಯ ಬೈಂದೂರು ಒತ್ತಿನೆಣೆ, ಶಿವಮೊಗ್ಗ ಗಡಿಭಾಗದ ಆಗುಂಬೆ ಹಾಗೂ ಚಿಕ್ಕಮಗಳೂರಿನ ಗಡಿಭಾಗವಾದ ಚಾರ್ಮಾಡಿ ಪ್ರದೇಶಗಳಲ್ಲಿ ರಸ್ತೆಗಳು ನಿರಂತರವಾಗಿ (ಭೂ ಕುಸಿತಕ್ಕೆ ಒಳಗಾಗಿ ಈ ಭಾಗದಲ್ಲಿ ಸಂಚರಿಸುತ್ತಿರುವ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ಇಂದಿರಾ ಕ್ಯಾಂಟೀನ್‌ಗಳ ಸಮಗ್ರ ಮಾಹಿತಿ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪ (೧೨೬) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಂದಿರಾ ಕ್ಯಾಂಟೀನ್‌ನ್ನು ಯಾವ ಯಾವ ಜಿಲ್ಲೆಗಳಲ್ಲಿ ತೆರೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಂದಿರಾ ಕ್ಯಾಂಟೀನ್ ಸಮಯದ ವಿಸ್ತರಣೆಗಾಗಿ ಗ್ರಾಹಕರ ಕೋರಿಕೆ ಇರುವುದು ನಿಜವೇ ; ಉಪಹಾರದ ಐಟಮ್ಸ್ ಹೆಚ್ಚಿಸುವ ಹಾಗೂ ಈಗಿರುವ ಅವಧಿಯನ್ನು ವಿಸ್ತರಿಸುವ ಹಾಗೂ ಬೇಡಿಕೆ ಬಂದಿದೆಯೇ ;

(ಇ) ಇಂದಿರಾ ಕ್ಯಾಂಟೀನ್ ನಿರ್ಮಿಸಲು ಬೇಕಾಗಿರುವ ಕಟ್ಟಡದ ಒಟ್ಟು ವೆಚ್ಚ ಎಷ್ಟು ; ಇದನ್ನು ಯಾರಿಗೆ ಗುತ್ತಿಗೆ ನೀಡಲಾಗಿದೆ ;

(ಈ) ಇಂದಿರಾ ಕ್ಯಾಂಟೀನ್‌ನ್ನು ಜನನೀಬಿಡ ಪ್ರದೇಶದಲ್ಲಿ ಪ್ರಾರಂಭಿಸದಿರುವ ಬಗ್ಗೆ ಸಾರ್ವಜನಿಕ ದೂರುಗಳಿವೆಯೇ ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು ?

## ಶಿವಮೊಗ್ಗ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ

**ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫ (೧೩೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಪಡಿತರ ನೀಡುತ್ತಿದ್ದು, ವಿದ್ಯುತ್ ಇಲ್ಲದ ಸಮಯದಲ್ಲಿ ಮತ್ತು ಸರ್ವರ್‌ಡೌನ್ ಇತ್ಯಾದಿ ಸಮಸ್ಯೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದಲ್ಲಿ, (ವಿವರ ನೀಡುವುದು)

(ಆ) ಬಯೋಮೆಟ್ರಿಕ್ ವ್ಯವಸ್ಥೆ ಮಾಡಿದ ಮೇಲೆ ಕಡ್ಡಾಯ ಯು.ಪಿ.ಎಸ್. ಇಟ್ಟುಕೊಳ್ಳುವ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ಬಯೋಮೆಟ್ರಿಕ್ ವ್ಯವಸ್ಥೆ ಇರುವುದರಿಂದ ಯು.ಪಿ.ಎಸ್. ಅಳವಡಿಸಿಕೊಳ್ಳುವುದು ಕಡ್ಡಾಯ ಎಂದು ಸರ್ಕಾರವು ಕಟ್ಟುನಿಟ್ಟಿನ ಆದೇಶ ನೀಡಿದೆಯೇ ; (ವಿವರ ನೀಡುವುದು)

(ಈ) ಬಯೋಮೆಟ್ರಿಕ್ ವ್ಯವಸ್ಥೆಯಿಲ್ಲದ ಕಡೆ ಪಡಿತರ ಹಂಚಿಕೆ ಮಾಡಲು ಮ್ಯಾನುಯಲ್ ವ್ಯವಸ್ಥೆ ಮಾಡಲಾಗಿದೆಯೇ ? (ವಿವರ ನೀಡುವುದು)

## ನಗರಾಭಿವೃದ್ಧಿ ಪ್ರಾಧಿಕಾರಗಳ ವತಿಯಿಂದ ಸಾರ್ವಜನಿಕ ಉದ್ದೇಶಕ್ಕಾಗಿ ನಿವೇಶನಗಳನ್ನು ನೀಡುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬ (೧೩೫) ಮಾನ್ಯ ನಗರಾಭಿವೃದ್ಧಿ ಮತ್ತು ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರಾಭಿವೃದ್ಧಿ ಪ್ರಾಧಿಕಾರಗಳ ವತಿಯಿಂದ ಸಾರ್ವಜನಿಕ ಉದ್ದೇಶಕ್ಕಾಗಿ ಸಂಘ–ಸಂಸ್ಥೆಗಳಿಗೆ ನೀಡುವ ನಿವೇಶನವನ್ನು ೩೦ ವರ್ಷಗಳ ಕಾಲಾವಧಿಗೆ ಲೀಜ್‌ನ್ನು ನೀಡುತ್ತಿದ್ದು, ಈ ಅವಧಿ ಮುಗಿದ ನಂತರ ಲೀಜ್‌ನ್ನು ಚಾಲ್ತಿ ಸಾಲಿನ ಹೆಚ್ಚಿನ ಮೊತ್ತವನ್ನು ಪಾವತಿಸಿ ನವೀಕರಣ ಮಾಡಿಕೊಂಡು ಮುಂದುವರೆಸಿಕೊಳ್ಳಲು ಸಂಘ–ಸಂಸ್ಥೆಗಳಿಗೆ ಸಾಧ್ಯವಾಗುವುದಿಲ್ಲ ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೩೦ ವರ್ಷಗಳ ಲೀಜ್ ಅವಧಿಯ ಬದಲಾಗಿ ೯೯ ವರ್ಷಗಳವರೆಗೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ತೊಗರಿ ಖರೀದಿ ಕೇಂದ್ರಗಳಲ್ಲಿನ ಭ್ರಷ್ಟಾಚಾರದ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೯೭ (೧೪೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ತೊಗರಿ ಖರೀದಿ ಕೇಂದ್ರಗಳ ಸಂಖ್ಯೆ ಎಷ್ಟು ; ಯಾವ ಯಾವ ಸಂಘ ಸಂಸ್ಥೆ ಹಾಗೂ ಸೊಸೈಟಿಗಳಿಗೆ ನೀಡಲಾಗಿದೆ; ಸ್ಪಷ್ಟ ಮಾಹಿತಿಯೊಂದಿಗೆ ತಾಲ್ಲೂಕುವಾರು ವಿವರ ನೀಡುವುದು ;

(ಆ) ತೊಗರಿ ಖರೀದಿ ಕೇಂದ್ರಗಳಲ್ಲಿ ರೈತರಿಂದ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರವು ಪ್ರತಿ ಕ್ವಿಂಟಾಲ್ ತೊಗರಿಗೆ ಎಷ್ಟು ದರ ನಿಗಧಿ ಪಡಿಸಿದೆ ಸ್ಪಷ್ಟ ಮಾಹಿತಿ ನೀಡುವುದು ;

(ಈ) ಕೆಲವು ಸೊಸೈಟಿಗಳು ಖರೀದಿ ಕೇಂದ್ರಗಳಲ್ಲಿ ಪ್ರತಿ ಕ್ವಿಂಟಾಲ್ ತೊಗರಿಗೆ ೩/೪ ಕೆ.ಜಿ. ತೊಗರಿ ಪಡೆಯುತ್ತಿರುವುದು ನಿಜವೇ; ಸರ್ಕಾರದ ದರದಂತೆ ಹಣ ಪಾವತಿ ಮಾಡದೇ ಇರುವ ಕೇಂದ್ರಗಳೆಷ್ಟು ? (ಮಾಹಿತಿ ನೀಡುವುದು)

## ರೈತರ ಸಾಲ ಮನ್ನಾ ಯೋಜನೆಯ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೯೮ (೧೪೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಸಹಕಾರಿ ಸಾಲದ ಮೊತ್ತ ಎಷ್ಟು ; ಸಾಲ ತೆಗೆದುಕೊಂಡ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮುಖ್ಯಮಂತ್ರಿಯವರ ಸಾಲ ಮನ್ನಾ ಯೋಜನೆಯಡಿ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಎಷ್ಟು ರೈತ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯ ಒಟ್ಟು ಫಲಾನುಭವಿಗಳೆಷ್ಟು; ಇದಕ್ಕೆ ವಿನಿಯೋಗಿಸಿದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಸಾಲ ಮನ್ನಾವಾದ ಎಷ್ಟು ಫಲಾನುಭವಿ ರೈತರ ಬ್ಯಾಂಕ್ ಖಾತೆಗೆ ಈವರೆಗೆ ಹಣ ಜಮಾ ಆಗಿದೆ ? (ಜಮಾವಾಗಿರುವವರ ಜಿಲ್ಲಾವಾರು ಫಲಾನುಭವಿವಾರು ಸ್ಪಷ್ಟ ವಿವರ ನೀಡುವುದು)

## ಲೋಕೋಪಯೋಗಿ ರಸ್ತೆಗಳ ನಿರ್ವಹಣೆ ಮತ್ತು ದುರಸ್ಥಿ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯ (೧೪೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆ ಎಷ್ಟು ಕಿ.ಮೀ. ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯರಸ್ತೆಗಳನ್ನು ನಿರ್ವಹಣೆ ಮಾಡುತ್ತಿದೆ ; ಈ ಹೆದ್ದಾರಿಗಳು ಮತ್ತು ಜಿಲ್ಲಾ ಮುಖ್ಯ ರಸ್ತೆಗಳು ಯಾವ್ಯಾವ ಊರುಗಳಿಗೆ ಮತ್ತು ಯಾವ್ಯಾವ ಅಂತರ್‌ರಾಜ್ಯಗಳಿಗೆ ಸಂಪರ್ಕವನ್ನು ಕಲ್ಪಿಸುತ್ತಿವೆ ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸರ್ಕಾರವು ಪ್ರತಿ ವರ್ಷ ಈ ರಸ್ತೆಗಳ ನಿರ್ವಹಣೆಗಾಗಿ ವೆಚ್ಚ ಮಾಡಿರುವ ಹಣವೆಷ್ಟು ; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಇ) ಜಿಲ್ಲೆಯ ಬಹುತೇಕ ರಾಜ್ಯ ಹೆದ್ದಾರಿಗಳು ಮತ್ತು ಎಂ.ಡಿ.ಆರ್. ರಸ್ತೆಗಳು ಹಾಳಾಗಿದ್ದು, ಈ ರಸ್ತೆಗಳ ದುರಸ್ಥಿ ಮತ್ತು ನಿರ್ವಹಣೆ ಸಲುವಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು ; (ವಿವರ ಒದಗಿಸುವುದು)

(ಈ) ಈ ರಸ್ತೆಗಳನ್ನು ಎಷ್ಟು ಅವಧಿಯಲ್ಲಿ ದುರಸ್ಥಿ ಮಾಡಲಾಗುವುದು; ಪ್ರಸಕ್ತ ಸಾಲಿನಲ್ಲಿ ಹೊಸ ರಾಜ್ಯ ಹೆದ್ದಾರಿಗಳನ್ನು ನಿರ್ವಹಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದೆ ಇದೆಯೇ ? (ತಾಲ್ಲೂಕುವಾರು ಅಂಕಿ–ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)

## ಡಿ.ಸಿ.ಸಿ. ಬ್ಯಾಂಕುಗಳು ಸಕ್ಕರೆ ಕಾರ್ಖಾನೆಗಳಿಗೆ ನೀಡಿದ ಸಾಲದ ವಿವರ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೦ (೧೪೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಷ್ಟು ಡಿ.ಸಿ.ಸಿ. ಬ್ಯಾಂಕ್‌ಗಳು ಯಾವ ಯಾವ ಸಕ್ಕರೆ ಕಾರ್ಖಾನೆಗಳಿಗೆ ಸಾಲ ನೀಡಿರುತ್ತದೆ ; (ಅಲ್ಪಾವಧಿ, ದೀರ್ಘಾವಧಿ ಮತ್ತು ಇತರೆ ಸಾಲಗಳ ವಿವರಗಳನ್ನು ನೀಡುವುದು)

(ಆ) ಈ ಸಾಲ ಪಡೆದಿರುವ ಎಷ್ಟು ಕಾರ್ಖಾನೆಗಳು ಪ್ರಾರಂಭಗೊಂಡಿವೆ; ಎಷ್ಟು ಕಾರ್ಖಾನೆಗಳು ನಿರ್ಮಾಣದ ಹಂತದಲ್ಲಿವೆ ; ಇನ್ನೂ ಪ್ರಾರಂಭವಾಗದಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಿರುವ ಬಡಾವಣೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೦೧ (೧೭೦) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬೆಂಗಳೂರಿನ ಸುತ್ತ ಬಡಾವಣೆಗಳನ್ನು ನಿರ್ಮಿಸಲು ೦೧.೦೧.೧೯೭೬ರಿಂದ ೩೧.೧೨.೨೦೦೫ರ ವರೆವಿಗೂ ಬಿ.ಡಿ.ಎ. ಕಾಯ್ದೆ ೧೯೭೬ರ ಕಾಲಂ ೧೯ರ ಅಂತಿಮ ಅಧಿಸೂಚನೆ ಹೊರಡಿಸಿರುವ ಸಂಖ್ಯೆ ಎಷ್ಟು ; ಅದರ ಅನುಗುಣವಾಗಿ ಒಟ್ಟು ಎಷ್ಟು ಎಕರೆ ಹಾಗೂ ಊರುಗಳನ್ನು ಅಧಿಸೂಚನೆಯ ಸ್ವಾಧೀನಕ್ಕೆ ಒಳಪಟ್ಟಿರುತ್ತದೆ ; (ಎಕರೆವಾರು ಪ್ರದೇಶ, ಊರುಗಳು ಸೇರಿದಂತೆ ಸಂಪೂರ್ಣ ಮಾಹಿತಿಗಳನ್ನು ದಾಖಲೆಗಳೊಂದಿಗೆ ನೀಡುವುದು)

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಭೂಸ್ವಾಧೀನ ಅಂತಿಮ ಅಧಿಸೂಚನೆಗೆ ಒಳಪಟ್ಟ ಜಮೀನುಗಳ ಪೈಕಿ ಬೆಂಗಳೂರು ಅಭಿವೃದ್ಧಿ

ಪ್ರಾಧಿಕಾರ ಭೌತಿಕವಾಗಿ (Symbolic position ಹೊರತುಪಡಿಸಿ) ಸ್ವಾಧೀನಪಡಿಸಿಕೊಂಡು, ಉದ್ದೇಶಿತ ಯೋಜನೆಯ ಬಡಾವಣೆ ರಚಿಸಿರುವ ಪ್ರಕರಣ/ಜಮೀನುಗಳ ಒಟ್ಟು ಎಕರೆವಾರು ಪ್ರದೇಶ, ಊರುಗಳು ಸೇರಿದಂತೆ ಪ್ರತ್ಯೇಕವಾಗಿ ಪ್ರತಿ ಅಧಿಸೂಚನೆಗೆ ಅನುಗುಣವಾಗಿ ಸಂಪೂರ್ಣ ಮಾಹಿತಿಗಳನ್ನು ದಾಖಲೆಗಳೊಂದಿಗೆ ನೀಡುವುದು ;

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಅಂತಿಮ ಅಧಿಸೂಚನೆಗೆ ಒಳಪಟ್ಟ ಜಮೀನುಗಳಲ್ಲಿ ಬಡಾವಣೆ ನಿರ್ಮಿಸದೆ ಇರುವ ಎಷ್ಟು ಜಮೀನುಗಳು/ಪ್ರಕರಣಗಳಲ್ಲಿ ಅನಧಿಕೃತ ಬಡಾವಣೆಗಳಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅಭಿವೃದ್ಧಿ ಹೊಂದಿರುವ ಪ್ರದೇಶಗಳ ಸಂಖ್ಯೆ ಎಷ್ಟು ; ಒಟ್ಟು ಎಕರೆವಾರು ಪ್ರದೇಶ, ಊರುಗಳು ಸೇರಿದಂತೆ ಪ್ರತ್ಯೇಕವಾಗಿ ಪ್ರತಿ ಅಧಿಸೂಚನೆಗೆ ಅನುಗುಣವಾಗಿ ಸಂಪೂರ್ಣ ಮಾಹಿತಿಗಳನ್ನು ದಾಖಲೆಗಳೊಂದಿಗೆ ನೀಡುವುದು ;

(ಈ) ಅಂತಿಮ ಅಧಿಸೂಚನೆಗೆ ಒಳಪಡುವ ಜಮೀನುಗಳ ಮೇಲೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಆಡಳಿತಾತ್ಮಕವಾಗಿ ತೆಗೆದುಕೊಂಡ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು ;

(ಉ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹೊರಡಿಸಿರುವ ಅಂತಿಮ ಅಧಿಸೂಚನೆಗೆ ಒಳಪಡುವ ಜಮೀನುಗಳಲ್ಲಿ ಅನಧಿಕೃತ ಬಡಾವಣೆಗಳನ್ನು ನಿರ್ಮಿಸಿರುವ ಜಮೀನುಗಳನ್ನು ಭೂಸ್ವಾಧೀನದಿಂದ ಕೈಬಿಡಲಾಗಿದೆಯೇ ; ಹಾಗಿದ್ದಲ್ಲಿ ಸಂಪೂರ್ಣ ಮಾಹಿತಿಗಳನ್ನು ದಾಖಲೆಗಳೊಂದಿಗೆ ನೀಡುವುದು ?

## ಪಾದಚಾರಿ ಮಾರ್ಗಗಳ ಮೇಲೆ ನಡೆಯುತ್ತಿರುವ ವ್ಯಾಪಾರಿಗಳ ಬಗ್ಗೆ

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೦೨ (೧೭೨) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಾದಚಾರಿ ಮಾರ್ಗಗಳಲ್ಲಿ ಯಾವುದೇ ರೀತಿಯ ವ್ಯಾಪಾರ ಮಾಡಬಾರದೆಂದು ಯಾವುದಾದರೂ ನ್ಯಾಯಾಲಯದ ಆದೇಶಗಳು ಇವೆಯೇ ; ಇದ್ದಲ್ಲಿ ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಗರದ ಪಾದಚಾರಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡುವ ಬಗ್ಗೆ ಕಾನೂನಿನಲ್ಲಿ ಅವಕಾಶ ಇದೆಯೇ ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬೆಂಗಳೂರು ಡೆಂಟಲ್ ಕಾಲೇಜು (ಕೆ.ಆರ್.ರಸ್ತೆ) ಈ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ಪಾಲಿಕೆ/ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬೆಂಗಳೂರು ಡೆಂಟಲ್ ಕಾಲೇಜು (ಕೆ.ಆರ್.ರಸ್ತೆ) ಈ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ನ್ಯಾಯಾಲಯದಿಂದ ತೆರವುಗೊಳಿಸಲು ತಡೆಯಾಜ್ಞೆ ಇದೆಯೇ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಉ) ಅದೇ ರೀತಿ ಗಾಂಧಿಬಜಾರ್, ಮಲ್ಲೇಶ್ವರಂ, ಜಯನಗರ, ಇಂದಿರಾನಗರ, ಜೆ.ಪಿ.ನಗರ ಇತ್ಯಾದಿ ಪ್ರದೇಶಗಳಲ್ಲಿ ಇರುವ ಪಾದಚಾರಿ ಮಾರ್ಗದಲ್ಲಿ ಶಾಶ್ವತವಾಗಿ ನೆಲೆಗೊಂಡಿರುವ ಅಂಗಡಿಗಳ ಬಗ್ಗೆ ಪಾಲಿಕೆ/ಸರ್ಕಾರ ತೆಗೆದುಕೊಂಡ ಕ್ರಮದ ಬಗ್ಗೆ ದಾಖಲಾತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು?

## JN-NURM-BSUP-IHSDP ಯೋಜನೆಗಳ ಬಗ್ಗೆ

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೦೩ (೧೭೧) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) JN-NURM-BSUP-IHSDP ಯೋಜನೆ ಯಾವ ವರ್ಷ ಪ್ರಾರಂಭವಾಗಿದೆ ; ಎಷ್ಟು ಯೋಜನೆ ಹಾಗೂ ಮನೆಗಳನ್ನು ನಿರ್ಮಿಸಲಾಗಿದೆ ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯ ಅಡಿಯಲ್ಲಿ ಪ್ರತಿ ಮನೆಯ ವೆಚ್ಚ ಎಷ್ಟು; ಮನೆ ನಿರ್ಮಿಸಲು ಹಾಗೂ ಮೂಲಭೂತ ಸೌಕರ್ಯಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಎಷ್ಟು ; ಫಲಾನುಭವಿಗಳ ಪಾಲು ಎಷ್ಟು ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜೀವ್ ಆವಾಜ್ ಯೋಜನೆ (RAY)ಯು ಯಾವ ವರ್ಷ ಪ್ರಾರಂಭವಾಗಿದೆ ; ಇಲ್ಲಿಯುವರೆವಿಗೂ ಎಷ್ಟು ಮನೆ (ಘಟಕ)ಗಳನ್ನು ನಿರ್ಮಿಸಲಾಗಿದೆ ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಈ) RAY ಯೋಜನೆಯ ಅಡಿಯಲ್ಲಿ ಪ್ರತಿ ಮನೆ ವೆಚ್ಚ ಎಷ್ಟು ; ಮನೆ ನಿರ್ಮಿಸಲು ಹಾಗೂ ಮೂಲಭೂತ ಸೌಕರ್ಯಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಎಷ್ಟು ; ಫಲಾನುಭವಿಗಳ ಪಾಲು ಎಷ್ಟು ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಉ) RAY ಯೋಜನೆಯ ಅಡಿಯಲ್ಲಿ ೨೦೧೩–೧೪ಕ್ಕೆ ಮೊದಲು ಕೇಂದ್ರ ಸರ್ಕಾರದಿಂದ ಎಷ್ಟು ಯೋಜನೆಗಳಿಗೆ ಹಾಗೂ ಮನೆಗಳಿಗೆ ಮಂಜೂರಾತಿ ಪಡೆಯಲಾಗಿತ್ತು ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಊ) RAY ಯೋಜನೆಯಲ್ಲಿ ಕೈಗೆತ್ತಿಕೊಂಡಿದ್ದ ಯೋಜನೆಗಳನ್ನು ಮಾರ್ಪಡಿಸಿ, ಪ್ರಧಾನ ಮಂತ್ರಿ ಆವಾಸ್ ಯೋಜನೆ (PMAY) "ಸರ್ವರಿಗೂ ಸೂರು" ಯೋಜನೆಯ ಅಡಿಯಲ್ಲಿ ಕೇಂದ್ರದಿಂದ ಮಂಜೂರಾತಿ ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ, ಎಷ್ಟು ಯೋಜನೆ ಹಾಗೂ ಮನೆಗಳನ್ನು RAY ಯಿಂದ ಮಾರ್ಪಡಿಸಿ, ಕೇಂದ್ರ ಸರ್ಕಾರ ಮಂಜೂರಾತಿ ನೀಡಿದೆ ; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಋ) ಇಲ್ಲಿಯವರೆವಿಗೂ PMAY ಯೋಜನೆಯ ಅಡಿಯಲ್ಲಿ ಪ್ರತಿ ಘಟಕದ ವೆಚ್ಚ ಎಷ್ಟು ; ಪ್ರತಿ ಘಟಕಕ್ಕೆ (ಮನೆ) ಹಾಗೂ ಮೂಲಭೂತ ಸೌಕರ್ಯಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಎಷ್ಟು ? (ಫಲಾನುಭವಿಗಳ ಪಾಲು ಎಷ್ಟು ; ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಸಂಚಾರಿ ನಿಯಮಗಳಿಗೆ ವಿನಾಯಿತಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪ (೧೧೮) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆಲವೊಂದು ಹಬ್ಬದ ದಿನಗಳಂದು ಮತ್ತು ಶುಕ್ರವಾರದಂದು ಬೆಂಗಳೂರು ನಗರದಲ್ಲಿ ಸಂಚಾರಿ ನಿಯಮಗಳಿಂದ ವಿನಾಯಿತಿ ನೀಡುವ ಬಗ್ಗೆ ಆದೇಶವಾಗಿದೆಯೇ ;

(ಆ) ಬೆಂಗಳೂರು ನಗರದಲ್ಲಿ ಒಂದು ಧರ್ಮದ ಹಬ್ಬದ ದಿನದಂದು ಆ ಧರ್ಮದ ಯುವಕರು ದ್ವಿ–ಚಕ್ರ ವಾಹನದಲ್ಲಿ ಇಬ್ಬರಿಗಿಂತ ಹೆಚ್ಚಿನ ಜನರು ಪ್ರಯಾಣಿಸುತ್ತಿರುವುದು, ಇತರ ಧರ್ಮದ ಪ್ರಾರ್ಥನಾ ಸ್ಥಳದ ಬಳಿ ದೊಡ್ಡ ಧ್ವನಿಯಲ್ಲಿ ಕರ್ಕಶವಾದ ಹಾರ್ನ್ ಬಳಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ೨ ತಿಂಗಳ ಅವಧಿಯಲ್ಲಿ ಹಬ್ಬದ ದಿನದಂದು ಮತ್ತು ಶುಕ್ರವಾರದಂದು ಬೆಂಗಳೂರು ನಗರದಲ್ಲಿ ಸಂಚಾರ ನಿಯಮ ಉಲ್ಲಂಘಿಸಿದ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಅದರಲ್ಲಿ ಇಬ್ಬರಿಗಿಂತ ಹೆಚ್ಚಿನ ಪ್ರಯಾಣಿಕರು ದ್ವಿ–ಚಕ್ರ ವಾಹನದಲ್ಲಿ ಪ್ರಯಾಣಿಸಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳು ಎಷ್ಟು; ವಿರುದ್ಧ ದಿಕ್ಕಿನಿಂದ ಪ್ರಯಾಣಿಸಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳೆಷ್ಟು ; ಶಿರಸ್ತ್ರಾಣ ಧರಿಸದೆ ವಾಹನ ಚಾಲನೆ ಮಾಡಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳೆಷ್ಟು ? (ವಿಭಾಗವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಕೊಳಗೇರಿಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೫ (೧೧೬) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೊಳಗೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಸರ್ಕಾರ ಯಾವ ಸೌಲಭ್ಯಗಳನ್ನು ನೀಡುತ್ತಿವೆ ;

(ಇ) ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಯುವಕರಿಗೆ ಉದ್ಯೋಗ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕೊಳಗೇರಿಗಳಲ್ಲಿ ವಾಸಿಸುತ್ತಿರುವವರಿಗೆ ವಸತಿ ವ್ಯವಸ್ಥೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಇದುವರೆಗೆ ಎಷ್ಟು ಮನೆಗಳನ್ನು ನಿರ್ಮಿಸಿ ಕೊಳಗೇರಿ ನಿವಾಸಿಗಳಿಗೆ ಹಂಚಲಾಗಿದೆ ?

## ನಗರ ಪ್ರದೇಶದಲ್ಲಿರುವ ಕೊಳಗೇರಿಗಳು ಅಪರಾಧದ ಕೇಂದ್ರಗಳಾಗುತ್ತಿರುವ ಬಗ್ಗೆ

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬ (೧೧೭) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರ ಪ್ರದೇಶದಲ್ಲಿರುವ ಕೊಳಗೇರಿಗಳು ಅಪರಾಧದ ಕೇಂದ್ರಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಹಳ್ಳಿ ಪ್ರದೇಶಗಳಿಂದ ನಗರಕ್ಕೆ ಉದ್ಯೋಗ ಅರಿಸಿ ಆಗಮಿಸುವ ಯುವಕರು ಸರಿಯಾದ ಮಾಹಿತಿಯ ಕೊರತೆಯಿಂದ ಉದ್ಯೋಗ ದೊರೆಯದೆ ಸ್ಲಂವಾಸಿಗಳಾಗುತ್ತಿದ್ದು, ವಿದ್ಯಾವಂತ ಯುವಕ ಯುವತಿಯರ ಬಾಳು ನರಕವಾಗುತ್ತಿರುವುದು ಮತ್ತು ಯುವಕರು ಸಮಾಜ ಘಾತುಕ ಶಕ್ತಿಗಳ ಜತೆ ಸೇರಿ ಅಪರಾಧಗಳನ್ನು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೊಳಗೇರಿಗಳಲ್ಲಿರುವ ವಿದ್ಯಾವಂತರು ಕ್ರಿಮಿನಲ್ ಆಗದಿರಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಕೊಳಗೇರಿಗಳಲ್ಲಿ ಜಾರಿಗೆ ತರಲಾಗಿದೆಯೇ ?

## ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ವಿಲೇವಾರಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (೧೫೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರಸ್ತೆಯ ತ್ಯಾಜ್ಯ ವಿಲೇವಾರಿಗೆ ವೆಚ್ಚ ಮಾಡುತ್ತಿರುವ ಮೊತ್ತವೆಷ್ಟು ; ಈ ಸ್ವಚ್ಛತಾ ಕಾರ್ಮಿಕರಿಗೆ ನೀಡುವ ವೇತನವೆಷ್ಟು ;

(ಆ) ರಾಜ್ಯಾದ್ಯಂತ ಇರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಸ್ವಚ್ಛತಾ ಕಾರ್ಮಿಕರಿದ್ದಾರೆ ; ಇವರಲ್ಲಿ ಖಾಯಂ ನೌಕರರ ಸಂಖ್ಯೆ ಎಷ್ಟು ; ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹೊರಗುತ್ತಿಗೆ ಕಾರ್ಮಿಕರ ಸಂಖ್ಯೆ ಎಷ್ಟು; ಈ ಸ್ವಚ್ಛತಾ ಕಾರ್ಮಿಕರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಬೆಂಗಳೂರು ಟ್ರಾಫಿಕ್ ಜಾಮ್ ಸಮಸ್ಯೆಗೆ ಟ್ರಾಫಿಕ್ ನಿಗಾ ಸಮಿತಿ ರಚನೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೧೨೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಟ್ರಾಫಿಕ್ ಜಾಮ್ ಸಮಸ್ಯೆ ದಿನದಿನಕ್ಕೂ ಹೆಚ್ಚಾಗುತ್ತಿದ್ದು, ಸುಗಮ ಸಂಚಾರಕ್ಕಾಗಿ ಹಮ್ಮಿಕೊಂಡಿರುವ ಮಾರ್ಗೋಪಾಯಗಳು ಯಾವುವು; (ವಿವರ ನೀಡುವುದು)

(ಆ) ಬೆಂಗಳೂರು ಟ್ರಾಫಿಕ್ ಸಮಸ್ಯೆ ಸುಗಮ ಸಂಚಾರ ಮತ್ತು ಕಳ್ಳತನ ತಡೆಯಲು ಎಲ್ಲಾ ರಸ್ತೆಗಳಿಗೂ ಸಿಸಿಟಿವಿ ಅಳವಡಿಕೆ ಮಾಡುವ ಬಗ್ಗೆ ಸರ್ಕಾರದ ನಿರ್ಧಾರವೇನು; (ವಿವರ ನೀಡುವುದು)

(ಇ) ಟ್ರಾಫಿಕ್ ನಿಗಾ ಸಮಿತಿ ರಚಿಸಲಾಗಿದೆಯೇ; ರಚಿಸಿದ್ದಲ್ಲಿ, ಸದರಿ ಸಮಿತಿಯ ವಿವರ ನೀಡುವುದು; ಮತ್ತು ಸಮಿತಿಯ ಕಾರ್ಯ ಮತ್ತು ಜವಾಬ್ದಾರಿಗಳೇನು; ರಚಿಸದಿದ್ದಲ್ಲಿ, ತಕ್ಷಣ ರಚಿಸಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ಹಿನಕಲ್ ಜಂಕ್ಷನ್ ಬಳಿ ನಿರ್ಮಿಸುತ್ತಿರುವ ಫ್ಲೈಓವರ್ ಕಾಮಗಾರಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೯ (೧೧೨) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಹುಣಸೂರು ರಸ್ತೆಯ, ಹಿನಕಲ್ ಜಂಕ್ಷನ್ ಬಳಿ ರಿಂಗ್ ರೋಡ್‌ಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಫ್ಲೈಓವರು

ಕಾಮಗಾರಿ ಕುಂಠಿತಗೊಂಡು ನಿಧಾನಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು; ಕಾಮಗಾರಿ ಯಾವಾಗ ಮುಕ್ತಾಯವಾಗಬೇಕಾಗಿತ್ತು; ಪದೇ ಪದೇ ಅವಧಿ ವಿಸ್ತರಣೆಗೆ ಕಾರಣಗಳೇನು; ಈ ಕಾಮಗಾರಿಯನ್ನು ದಸರಾ ಹಬ್ಬದ ಒಳಗೆ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ;

(ಇ) ಕೊಲಂಬಿಯಾ ಏಷಿಯಾ ಆಸ್ಪತ್ರೆ ಮತ್ತು ಬಂಡಿಪಾಳ್ಯ ರಿಂಗ್ ರೋಡ್ ಜಂಕ್ಷನ್‌ನಲ್ಲಿ ದಿನ ನಿತ್ಯ ಟ್ರಾಫಿಕ್ ಜಾಮ್ ಆಗುತ್ತಿದ್ದು, ಇಲ್ಲಿಯೂ ಕೂಡಾ ಫ್ಲೈಓವರ್ ಅಥವಾ ಗ್ರೇಡ್ ಸಪರೇಟರ್ ನಿರ್ಮಾಣ ಮಾಡಲು ಕ್ರಮ ಜರುಗಿಸಲಾಗುವುದೇ; ಈ ಬಗ್ಗೆ ಸರ್ವೇ ಮಾಡಿ ಡಿಪಿಆರ್ ತಯಾರಿಸಲು ಕಾಮಗಾರಿ ಪ್ರಾರಂಭಿಸಲು ತಕ್ಷಣ ಕ್ರಮ ಜರುಗಿಸಲಾಗುವುದೇ?

## ಕೊಳ್ಳೇಗಾಲ-ಹನೂರು-ಮಹದೇಶ್ವರ ಬೆಟ್ಟದ ರಸ್ತೆಯ ದುರಸ್ತಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೧೦ (೧೧೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳ್ಳೇಗಾಲ-ಹನೂರು ರಾಜ್ಯ ಹೆದ್ದಾರಿ ದುರಸ್ತಿಗೊಂಡ ಅಲ್ಪ ಅವಧಿಯಲ್ಲಿಯೇ ಮಳೆಗೆ ಕೊಚ್ಚಿ ಹೋಗಿ ಹೊಂಡಗಳಿಂದ ತುಂಬಿದ್ದು ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರಸ್ತೆಯು ಇತ್ತೀಚೆಗೆ ದುರಸ್ತಿ ಆಗಿದ್ದು ಯಾವಾಗ; ರಸ್ತೆಯ ದುರಸ್ತಿಗೆ ವೆಚ್ಚವಾದ ಹಣ ಎಷ್ಟು;

(ಆ) ಕೂಡಲೇ ಈ ರಸ್ತೆಯ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ಜರುಗಿಸಲಾಗುವುದೇ;

(ಇ) ಹನೂರು–ಮಹದೇಶ್ವರ ಬೆಟ್ಟ ರಸ್ತೆಯೂ ಕೂಡಾ ಹೊಂಡ ಗುಂಡಿಗಳಿಂದ ಕೂಡಿದ್ದು, ಕೂಡಲೇ ಈ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಕೈಗೊಂಡು ರಸ್ತೆಯನ್ನು ಸರಿಪಡಿಸಲಾಗುವುದೇ?

## ಚಾಮುಂಡಿ ಬೆಟ್ಟದ ರಸ್ತೆಯ ತಡೆಗೋಡೆ ಕುಸಿದಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೧ (೧೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮುಂಡಿ ಬೆಟ್ಟದಿಂದ ಉತ್ತನಹಳ್ಳಿಗೆ ಹೋಗುವ ಬೆಟ್ಟದ ಮಾರ್ಗದಲ್ಲಿ ಅಲ್ಲಲ್ಲಿ ತಡೆಗೋಡೆ ಕುಸಿದು ಅಪಾಯಕಾರಿ ಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಡಿದಾದ ತಿರುವುಗಳು ಇರುವ ಕಡೆ ತಡೆ ಗೋಡೆಗಳು ಕುಸಿದಿದ್ದು, ಈ ಮಾರ್ಗದಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚರಿಸುವುದರಿಂದ ಸಂಭವನೀಯ ಅಪಾಯ ತಡೆಗಟ್ಟಲು ತಾತ್ಕಾಲಿಕ ಕ್ರಮ ಜರುಗಿಸುವುದರ ಜೊತೆಗೆ, ತಡೆಗೋಡೆಯನ್ನು ಬೇಗ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ?

## ವಾರದ ಬಿಡುವು (ವೀಕ್ಲಿ ಆಫ್) ಉಪಯೋಗಿಸಿಕೊಳ್ಳದ ಪೊಲೀಸ್ ಸಿಬ್ಬಂದಿಗೆ ದಿನದ ವೇತನ ನೀಡುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೨ (೧೧೪) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಲಾಖಾ ಕೆಲಸದ ಒತ್ತಡ ಹಾಗೂ ಅಧಿಕೃತ ಕೆಲಸದ ಕಾರಣ ಅನಿವಾರ್ಯ ಕಾರಣಗಳಿಂದ ವೀಕ್ಲಿ ಆಫ್ (ವಾರದ ಬಿಡುವು) ಪಡೆಯದೇ ಸೇವೆ ಮಾಡುತ್ತಿರುವ ಪೊಲೀಸ್ ಸಿಬ್ಬಂದಿಗೆ (ಸಿವಿಲ್ ಹಾಗೂ ವಿವಿಧ ಸಶಸ್ತ್ರಪಡೆ ಸಿಬ್ಬಂದಿಗಳು ಸೇರಿ) ನೀಡುತ್ತಿರುವ ಒಂದು ದಿನದ ಸಂಭಾವನೆ ಎಷ್ಟು;

(ಆ) ಅಧಿಕೃತ ಕೆಲಸ ನಿಮಿತ್ತ ವಾರದ ಬಿಡುವು ಪಡೆಯದ ಪೊಲೀಸ್ ಸಿಬ್ಬಂದಿಗೆ, ವಾರದ ಬಿಡುವಿನಲ್ಲಿ ಕಾರ್ಯನಿರ್ವಹಿಸಿದುದ್ದಕ್ಕೆ ಪ್ರತಿಯಾಗಿ ಒಂದು ದಿನದ ವೇತನ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಸಿ.ಐ.ಡಿ./ಸಿ.ಓ.ಡಿ. ತನಿಖಾ ವರದಿ ನೀಡುವ ಕುರಿತು

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ ) :–**

೧೧೩ (೧೫೮) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೦ ರಿಂದ ಇಲ್ಲಿಯವರೆಗೆ ಸಿ.ಐ.ಡಿ./ಸಿ.ಓ.ಡಿ. ತನಿಖೆಗಾಗಿ ವಹಿಸಲ್ಪಟ್ಟ ಪ್ರಕರಣಗಳೆಷ್ಟು; ಸದರಿ ಪ್ರಕರಣಗಳು ಯಾವ ಹಂತದಲ್ಲಿವೆ; (ಪ್ರಕರಣವಾರು ಇಲಾಖಾವಾರು ವಿವರ ನೀಡುವುದು)

(ಆ) ಸದರಿ ಪ್ರಕರಣಗಳನ್ನು ವರ್ಷಾನುಗಟ್ಟಲೇ ನೆನೆಗುದಿಯಲ್ಲಿಟ್ಟುಕೊಂಡು ಚಾರ್ಜ್‌ಶೀಟ್ ಹಾಕದೆ ಅಥವಾ ತನಿಖೆ ನಡೆಸಿ "ಬಿ" ರಿಪೋರ್ಟ್ ಹಾಕದೇ ತನಿಖೆ ಹಂತದಲ್ಲಿದೆಯೆಂದು ವಿಳಂಬ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ೨೦೧೦ ರಲ್ಲಿ ಕೆ.ಪಿ.ಎಸ್.ಸಿ. ಯಿಂದ ನೇಮಕಗೊಂಡ ೪೦೨ ಕಿರಿಯ ತರಬೇತಿ ಅಧಿಕಾರಿಗಳು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅವರಲ್ಲಿ ಕೆಲವರು ಖಾಸಗಿ ಕ್ಷೇತ್ರದ ೨ ವರ್ಷದ ಸೇವಾ ಅನುಭವದ ನಕಲು ಪತ್ರ ಸಲ್ಲಿಸಿ ನೇಮಕಾತಿ ಹೊಂದಿರುತ್ತಾರೆಂದು ದೂರು ಬಂದ ಹಿನ್ನಲೆಯಲ್ಲಿ ಪ್ರಕರಣವನ್ನು ತನಿಖೆ ಮಾಡಲು ಸಿ.ಐ.ಡಿ.ಗೆ ಒಪ್ಪಿಸಿದ್ದು, ಇದುವರೆಗೂ ತನಿಖಾ ವರದಿ ಬಾರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ತೆಗೆದುಕೊಂಡಿದೆ;

(ಈ) ಸದರಿ ಪ್ರಕರಣದ ತನಿಖೆ ಸಿಐ.ಡಿ. ಯಿಂದ ಮುಗಿಯದೇ ಇದ್ದರೆ, ಈ ಪ್ರಕರಣವನ್ನು ಮುಕ್ತಾಯಗೊಳಿಸಲು ಇನ್ನು ಎಷ್ಟು ಕಾಲಾವಕಾಶವನ್ನು ತೆಗೆದುಕೊಳ್ಳಲಾಗುವುದು ?

## ಬೆಂಗಳೂರು ಮಹಾನಗರ ಪಾಲಿಕೆ ಕೇಂದ್ರಿಕೃತ ಸಹಾಯವಾಣಿಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪ (೧೬೭) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಷ್ಟು ವಲಯಗಳಲ್ಲಿ ನಾಗರಿಕರ ಸಮಸ್ಯೆಗೆ ಸ್ಪಂದಿಸುವ ಸಹಾಯವಾಣಿ ಕೇಂದ್ರಗಳು ಸಮರ್ಪಕವಾಗಿ ಕರ್ತವ್ಯ ನಿರ್ವಹಿಸುತ್ತಿವೆ;

(ಆ) ವಲಯ ಕಚೇರಿಗಳಲ್ಲಿ ದಾಖಲಾಗುವ ದೂರುಗಳು ಸಕಾಲದಲ್ಲಿ ವಿಲೆಯಾಗುತ್ತಿರುವ ಕುರಿತು ಕೇಂದ್ರ ಕಚೇರಿ ಗಮನಕ್ಕೆ ಬರುತ್ತಿದೆಯೇ; ಇಲ್ಲವಾದಲ್ಲಿ ಇದಕ್ಕೆ ಕಂಡುಕೊಂಡ ಮಾರ್ಗೋಪಾಯಗಳೇನು;

(ಇ) ಈ ಹಿಂದೆ ಆರಂಭಿಸಲು ಉದ್ದೇಶಿಸಲಾಗಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೇಂದ್ರೀಕೃತ ಸಹಾಯವಾಣಿಯ ಕೇಂದ್ರ ತೆರೆಯಲು ಮೀಸಲಿರಿಸಿದ ಅನುದಾನವೆಷ್ಟು; ಅದರಲ್ಲಿ ಈವರೆಗೆ ಬಳಕೆಯಾದ ಅನುದಾನ ಎಷ್ಟು; ಹಾಗೂ ಅದು ಈಗ ಯಾವ ಹಂತದಲ್ಲಿದೆ;

(ಈ) ಸದರಿ ಉದ್ದೇಶಿತ ಸಹಾಯವಾಣಿ ಕೇಂದ್ರವು ಕಾರ್ಯಾರಂಭ ಮಾಡದಿರುವುದಕ್ಕೆ ಕಾರಣಗಳೇನು; ಹಾಗೂ ಮಳೆಗಾಲದ ಸಮಯದಲ್ಲಿ ಜನರು ಅನುಭವಿಸುವ ತೊಂದರೆಗಳಿಗೆ ತುರ್ತಾಗಿ ಸ್ಪಂದನೆ ದೊರಕಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ತೆಗೆದುಕೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)

## ಬೆಂಗಳೂರು ಜಲಮಂಡಳಿಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫ (೧೬೭) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಜಲಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯವಾಗಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆಯ ವಿವರವಾದ ಮಾಹಿತಿ ನೀಡುವುದು;

(ಆ) ಸದ್ಯ ಜಲಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳಲ್ಲಿ ಪೂರ್ಣಾವಧಿ ಮತ್ತು ಅರೆಕಾಲಿಕ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಖಾಲಿ ಇರುವ ಹುದ್ದೆಗಳ ಪೂರ್ಣಾವಧಿ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರವು ತೆಗೆದುಕೊಂಡಿರುವ ಅಗತ್ಯ ಕ್ರಮಗಳೇನು;

(ಈ) ಜಲಮಂಡಳಿಯಲ್ಲಿ ಸಾರ್ವಜನಿಕರೊಂದಿಗೆ ನೇರವಾಗಿ ವ್ಯವಹರಿಸಲು ಸಂಪರ್ಕಕ್ಕೆ ಬರುವ ಪ್ರಮುಖ ವಿಭಾಗಗಳು ಯಾವುವು; ಅವುಗಳಲ್ಲಿ ಅಧಿಕಾರಿಗಳ ಹುದ್ದೆ ಖಾಲಿ ಇರುವುದು ಮತ್ತು ಅವುಗಳಿಂದ ಜನರ ಸಮಸ್ಯೆಗಳಿಗೆ ಸ್ಪಂದನೆ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣವಾದ ವಿವರವನ್ನು ನೀಡುವುದು)

## ಪಿಓಎಸ್ ಯಂತ್ರದ ಕಾರ್ಯಾನುಷ್ಠಾನದ ಬಗ್ಗೆ

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬ (೧೬೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಮುಂಗಾರು ಹಂಗಾಮಿನಿಂದಲೇ ರಾಜ್ಯಾದ್ಯಂತ ರೈತರಿಗೆ ರಸಗೊಬ್ಬರವನ್ನು ಪಿಓಎಸ್ (ಪಾಯಿಂಟ್ ಆಫ್ ಸೇಲ್) ಮೂಲಕ ನೀಡಲು ರಾಜ್ಯದಲ್ಲಿನ ಎಷ್ಟು ವ್ಯವಸಾಯ ಸೇವಾ ಸಹಕಾರಿ ಸಂಘಗಳಿಗೆ ಸರ್ಕಾರದಿಂದ ಪಿಓಎಸ್ ಯಂತ್ರಗಳನ್ನು ವಿತರಿಸಲಾಗಿದೆ;

(ಆ) ಗ್ರಾಮಾಂತರ ಪ್ರದೇಶಗಳಲ್ಲಿರುವ ವ್ಯವಸಾಯ ಸೇವಾ ಸಹಕಾರಿ ಸಂಘಗಳಲ್ಲಿ ರೈತರು ಬೆರಳು ಮುದ್ರೆ ನೀಡಲು ಪರಿಣಾಮಕಾರಿ ಇಂಟರ್‌ನೆಟ್ ಸಂಪರ್ಕ ವ್ಯವಸ್ಥೆಗೆ ಏನು ಕ್ರಮ ಅನುಸರಿಸಲಾಗಿದೆ;

(ಇ) ಪಿಓಎಸ್ (ಪಾಯಿಂಟ್ ಆಫ್ ಸೇಲ್) ಯಂತ್ರದಲ್ಲಿ ರೈತರ ವಿವರ ದಾಖಲಿಸಲು ಮತ್ತು ರೈತರ ಬಯೋಮೆಟ್ರಿಕ್ ನೀಡುವುದು ಸೇರಿದಂತೆ ವ್ಯವಸಾಯ ಸೇವಾ ಸಹಕಾರಿ ಸಂಘಗಳಿಗೆ ಮತ್ತು ರೈತರಿಗೆ ತಿಳುವಳಿಕೆ ನೀಡಲು ಏನು ಕ್ರಮ ವಹಿಸಲಾಗಿದೆ?

## ಕೊಡಗು ಜಿಲ್ಲೆಯಲ್ಲಿನ ರಸ್ತೆಗಳು ಮಳೆಯಿಂದ ಹದಗೆಟ್ಟಿರುವ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭ (೧೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರವಾಸೋದ್ಯಮ ಪ್ರವಾಸಿ ಸ್ಥಳಗಳಾದ ಶ್ರೀ ಕ್ಷೇತ್ರಗಳಾದ ತಲಕಾವೇರಿ, ಅಬ್ಬಿಪಾಲ್ಸ್, ಇರ್ಪು ಪಾಲ್ಸ್, ನಾಗರಹೊಳೆ, ದುಬಾರೆ, ಚೇಲಾವರ ಪಾಲ್ಸ್ ಮತ್ತು ನಾಲ್ಕುನಾಡು ಅರಮನೆ ಮುಂತಾದ ಸ್ಥಳಗಳಿಗೆ ಹೋಗುವ ರಸ್ತೆ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರಸ್ತುತ ಸಾಲಿನಲ್ಲಿ ಸದರಿ ಸ್ಥಳಗಳಿಗೆ ಹೋಗುವ ರಸ್ತೆ ದುರಸ್ಥಿ, ಅಭಿವೃದ್ಧಿಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು;

(ಇ) ಅನುದಾನ ಬಿಡುಗಡೆಯಾಗಿದ್ದಲ್ಲಿ, ಕಾಮಗಾರಿ ಯಾವ ಹಂತದಲ್ಲಿದೆ;

(ಈ) ಅನುದಾನ ಬಿಡುಗಡೆಯಾಗದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ಇರುವ ತೊಡಕುಗಳೇನು?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮ (೧೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿಗಾಗಿ ಹೊರಗುತ್ತಿಗೆಯಿಂದ ನೇಮಕ ಮಾಡಲಾದ ನೌಕರರ ಸಂಖ್ಯೆ ಎಷ್ಟು; ಯಾವ ಯಾವ ಹುದ್ದೆಗಳನ್ನು ಹೊರಗುತ್ತಿಗೆಯಿಂದ ತೆಗೆದುಕೊಳ್ಳಲಾಗಿದೆ;

(ಆ) ಪೌರಾಡಳಿತ ಇಲಾಖೆಯಿಂದ ೨೦೧೭ನೇ ಡಿಸೆಂಬರ್ ಮಾಹೆಯಲ್ಲಿ ಜಾರಿಗೊಳಿಸಲಾದ ಆದೇಶದಂತೆ ಪ್ರತಿ ೭೦೦ ಜನಸಂಖ್ಯೆಗೆ ಒಬ್ಬರಂತೆ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಮಾತ್ರ ಅವಕಾಶ ಎಂದು ತಿಳಿಸಿದ್ದು, ಇದರಿಂದ ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿಗೆ ಆಗುವ ಸಮಸ್ಯೆಯನ್ನು ಸರ್ಕಾರ ಮನಗಂಡಿದೆಯೇ; (ವಿವರ ನೀಡುವುದು)

(ಇ) ಈ ಆದೇಶ ಜಾರಿಗೆ ಬಂದಲ್ಲಿ ಪ್ರಸ್ತುತ ಹೊರಗುತ್ತಿಗೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಹುದ್ದೆ ಕಳೆದುಕೊಂಡು ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿ ಸಮಸ್ಯೆ ಹೆಚ್ಚಾಗಲಿದ್ದು, ಸರ್ಕಾರ ಈ ವಿಚಾರದಲ್ಲಿ ಯಾವ ಕ್ರಮ ವಹಿಸಿದೆ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕೋಮು ಸಾಮರಸ್ಯ ಹಾಳಾಗಿ ಗಲಭೆಗಳು ಉಂಟಾಗುತ್ತಿರುವ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯ (೧೩) ಮಾನ್ಯ ಉಪಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಕೋಮುಗಲಭೆಗಳು ಎಷ್ಟು; ಎಲ್ಲೆಲ್ಲಿ ನಡೆದಿವೆ; (ವಿವರ ನೀಡುವುದು)

(ಆ) ಈ ಕೋಮುಗಲಭೆಗಳ ಕಾರಣದಿಂದ ಮರಣ ಹೊಂದಿದ, ಕೊಲೆಯಾದವರ ಸಂಖ್ಯೆ ಎಷ್ಟು ಗಲಭೆಗಳಿಗೆ ಕಾರಣವಾದ ಅಂಶಗಳು ಯಾವುವು; ಗಲಭೆಗಳಿಗೆ ಕಾರಣವಾದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; (ಪ್ರಕರಣಗಳ ವಿವರ ನೀಡುವುದು)

(ಇ) ಈ ಗಲಭೆಗಳಿಗೆ ಕಾರಣರಾದವರ ಮೇಲೆ ಮಾಡಲಾದ ಕೇಸ್‌ಗಳನ್ನು ವಾಪಸ್ ಪಡೆಯಲಾಗಿದೆಯೇ; ಇದ್ದಲ್ಲಿ ಅವು ಯಾವುವು; (ವಿವರಗಳನ್ನು ಪ್ರಕರಣಗಳವಾರು ನೀಡುವುದು)

(ಈ) ರಾಜ್ಯದಲ್ಲಿ ಹಲವು ಪ್ರಕರಣಗಳ ಮೇಲಿನ ಕೇಸ್‌ಗಳನ್ನು ವಾಪಸ್ ಪಡೆಯಲಾಗುವುದು ಎಂದು ಈ ಹಿಂದಿನ ಸರ್ಕಾರವು ಆಶ್ವಾಸನೆ

ನೀಡಿದ್ದು, ದಿನಾಂಕ: ೩೦.೦೬.೨೦೧೮ರವರೆಗೆ ವಾಪಸ್ ಪಡೆಯಲಾದ ಕೇಸ್‌ಗಳು ಯಾವುವು? (ಪ್ರಕರಣಗಳವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯ ಪೊಲೀಸ್ ಸಿಬ್ಬಂದಿ ಮತ್ತು ಪೊಲೀಸ್ ಠಾಣೆಗಳ ಕುರಿತು

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦ (೧೬) ಮಾನ್ಯ ಉಪಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಪೊಲೀಸರ ಸಂಖ್ಯೆ ಎಷ್ಟು; (ಠಾಣೆ/ಉಪಠಾಣೆಗಳವಾರು ಹುದ್ದೆವಾರು ವಿವರ ನೀಡುವುದು)

(ಆ) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು, ಖಾಲಿ ಇರುವ ಹುದ್ದೆಗಳೆಷ್ಟು, ಇವುಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಅರ್ಕಾವತಿ ಬಡಾವಣೆಯಲ್ಲಿ ಹಂಚಿಕೆಯಾಗಿರುವ ನಿವೇಶನಗಳ ಗೊಂದಲದ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧ (೧೫) ಮಾನ್ಯ ಉಪಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಲಾದ ಅರ್ಕಾವತಿ ಬಡಾವಣೆಯಲ್ಲಿ ಇಲ್ಲಿಯವರೆವಿಗೂ ಹಂಚಿಕೆಯಾಗಿ

ಸ್ವಾಧೀನ ಪತ್ರ ನೀಡಿದ್ದರಾ, ಸ್ಥಳ ಗುರುತಿಸಲಾಗದಿರುವುದರಿಂದ ಫಲಾನುಭವಿಗಳಿಗೆ ಗೊಂದಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರವು ಈ ಫಲಾನುಭವಿಗಳ ಗೊಂದಲವನ್ನು ಸರಿಪಡಿಸಲು ಸರ್ವೇ ಕಾರ್ಯವನ್ನು ಕೈಗೊಂಡಿದೆಯೇ; (ಪೂರ್ಣ ವಿವರ ನೀಡುವುದು)

(ಆ) ಈ ಬಡಾವಣೆಯಲ್ಲಿನ ೧೯ನೇ ಬ್ಲಾಕ್‌ನಲ್ಲಿ ಹಂಚಿಕೆ ಮಾಡಲಾಗಿರುವ ನಿವೇಶನವಾರು ನಕಾಶೆಯನ್ನು ಹಾಗೂ ಮೂಲ ಸೌಲಭ್ಯಗಳ ಸಂಪೂರ್ಣ ವಿವರ ನೀಡುವುದು; ಈ ನಿರ್ಮಾಣ ಕಾರ್ಯಕ್ಕಾಗಿ ಮಾಡಲಾಗಿರುವ ವೆಚ್ಚದ ವಿವರ ನೀಡುವುದು?

## ಮಂಡ್ಯ ನಗರದಲ್ಲಿನ ತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೨ (೧೨೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್‌ಗಳಲ್ಲಿನ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ತ್ಯಾಜ್ಯ ವಿಲೇವಾರಿ ನಿರ್ವಹಣೆಗಾಗಿ ಅನುಮೋದನೆಗೊಂಡ ಹುದ್ದೆಗಳೆಷ್ಟು; ಅಪೈಕಿ ಖಾಲಿ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಒಣ ಮತ್ತು ದ್ರವ ತ್ಯಾಜ್ಯಗಳನ್ನು ವಿಂಗಡಿಸಿ ಮಂಡ್ಯನಗರ ವ್ಯಾಪ್ತಿಯಲ್ಲಿ ವೈಜ್ಞಾನಿಕವಾಗಿ ಮತ್ತು ಸಮರ್ಪಕವಾಗಿ ತ್ಯಾಜ್ಯವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ಮಳೆಗಾಲದಲ್ಲಿ ಆಗುತ್ತಿರುವ ತೊಂದರೆಗಳ ಬಗ್ಗೆ

**ಶ್ರೀಮತಿ ತಾರಾ ಅನುರಾಧ (ನಾಮನಿರ್ದೇಶನ ಹೊಂದಿರುವವರು) :–**

೧೨೩ (೦೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಅವ್ಯವಸ್ಥೆಗಳ ಮಹಾಪೂರಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿವೆಯೇ ;

(ಆ) ಈಗಲೂ ಮಳೆ ಬಂದರೆ ನದಿಯ ಹಾಗೆ ಬದಲಾಗುವ ರಾಜಧಾನಿಯ ಅನೇಕ ರಸ್ತೆಗಳು ಹಾಗೂ ಬಡಾವಣೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಇ) ಮಳೆಗಾಲದಲ್ಲಿ ಹಳೆಯ ಮರಗಳು ಧರೆಗೆ ಉರುಳಿ ವಾಹನಕ್ಕೆ ಹಾಗೂ ಜನರ ಮನೆಗಳ ಮೇಲೆ ಬೀಳುವುದು, ಇದರ ತಡೆಯುವಿಕೆಗೆ ಸರ್ಕಾರ ಪಾಲಿಸುತ್ತಿರುವ ನಿಯಮಗಳು ಏನು ;

(ಈ) ನಗರದಲ್ಲಿ ಹೊಸದಾಗಿ ನಿರ್ಮಾಣವಾಗಿರುವ ಸುರಂಗ ಮಾರ್ಗಗಳು ಕೆರೆಗಳಾಗಿ ಮಾರ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಕೊಡಗು ಜಿಲ್ಲೆಯಲ್ಲಿನ ಪಡಿತರ ವಿತರಣೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೪ (೧೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪ್ರತಿ ನ್ಯಾಯಬೆಲೆ ಅಂಗಡಿಯ ಹೆಸರು ಹಾಗೂ ಅದರ ವ್ಯಾಪ್ತಿಗೆ ಒಳಪಟ್ಟಿರುವ ಗ್ರಾಮಗಳ ಸಂಪೂರ್ಣ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಸಂಚಾರಿ ಪಡಿತರ ವಿತರಣೆಯಾಗುತ್ತಿರುವ ಗ್ರಾಮಗಳೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ವಿತರಣೆಯಾಗುತ್ತಿರುವ ಗ್ರಾಮಗಳೆಷ್ಟು ?

## ಔರಾದ್–ಬೀದರ್ ರಾಜ್ಯ ಹೆದ್ದಾರಿ ರಸ್ತೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೫ (೧೨೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಔರಾದ್–ಬೀದರ್ ರಾಜ್ಯ ಹೆದ್ದಾರಿ ರಸ್ತೆ ಸಂಪೂರ್ಣ ಹಾಳಾಗಿದ್ದು, ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ೨೦೧೫ ರಿಂದ ಇಲ್ಲಿಯವರೆಗೆ ಔರಾದ್–ಬೀದರ್ ರಸ್ತೆಗಾಗಿ ಖರ್ಚು ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಔರಾದ್–ಬೀದರ್ ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆ–ಯಾಗಿದ್ದು, ರಸ್ತೆ ನಿರ್ಮಾಣವಾಗಲು ಇನ್ನೂ ಎಷ್ಟು ಕಾಲಾವಧಿ ಬೇಕಾಗುವುದು; (ಮಾಹಿತಿ ನೀಡುವುದು)

(ಈ) ಅತಿವೃಷ್ಟಿಯಿಂದ ಹಾಳಾದ ಬ್ರಿಡ್ಜ್‌ಗಳ ದುರಸ್ಥಿಗೆ ಖರ್ಚು ಮಾಡಿದ ಅನುದಾನವೆಷ್ಟು ; ಕಾಮಗಾರಿ ಕಳಪೆ ಮಟ್ಟದಲ್ಲಿ ನಡೆದಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೀದರ್ ಜಿಲ್ಲೆಯ ಅಕ್ಕಪಕ್ಕದ ಅಲೆಮಾರಿ ಜನಾಂಗದವರಿಗೆ ಮನೆಗಳು ಇಲ್ಲದಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬ (೧೨೫) ಮಾನ್ಯ ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಅಕ್ಕಪಕ್ಕದ ಹಾಗೂ ಅಲೆಮಾರಿ ಜನಾಂಗದ ನಿವಾಸಿಗಳಿಗೆ ಮನೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಎಷ್ಟು ಅಕ್ಕಪಕ್ಕದ ಹಾಗೂ ಅಲೆಮಾರಿ ಜನಾಂಗದ ನಿವಾಸಿಗಳಿಗೆ ಮನೆ ಇಲ್ಲದಿರುವ ಬಗ್ಗೆ ಸರ್ವೇ ನಡೆಸಲಾಗಿದೆಯೇ; ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯ ನೂತನ ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೭ (೧೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇನ್ನೂ ಯಾವ ಯಾವ ಪ್ರದೇಶದಲ್ಲಿ ನೂತನ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆ;

(ಆ) ಬೀದರ್ ಜಿಲ್ಲೆಯ ಭಾಲ್ಕಿ ಕ್ಷೇತ್ರದಲ್ಲಿ ಸಂಚಾರ ಪೊಲೀಸ್ ಠಾಣೆ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಬೀದರ್ ಜಿಲ್ಲೆಯ ಎಷ್ಟು ಪೊಲೀಸ್ ಠಾಣೆಗಳು ನಿಗದಿಗಿಂತ ಹೆಚ್ಚಿನ ಪ್ರಮಾಣದಲ್ಲಿ ತನ್ನ ವ್ಯಾಪ್ತಿಯನ್ನು ಹೊಂದಿವೆ ; ಹೊಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಬೀದರ್ ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಫ್ತಾ ವಸೂಲಿ ಮಾಡಿ ಅಕ್ರಮ ದಂದೆಗೆ ಪ್ರೋತ್ಸಾಹ ನೀಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೮ (೧೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಕೆಲವೊಂದು ತಾಲ್ಲೂಕುಗಳಲ್ಲಿ ಮಟಕಾ, ಇಸ್ಪಿಟ್ ಜೂಜಾಟ್ ಅಕ್ರಮ ಸಾರಾಯಿ ಮಾಡುವ ಜಾಲವು

ಅನೇಕ ವರ್ಷಗಳಿಂದ ಅಸ್ತಿತ್ವದಲ್ಲಿದ್ದು ಈಗ ಅದು ಮಿತಿಮೀರಿ ಬೆಳೆದು ಕೆಲವೊಂದು ಕುಟುಂಬಗಳು ಬೀದಿಪಾಲಾಗಿದ್ದು, ಇದನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ನಿಷ್ಕ್ರೀಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕೆಲವೊಂದು ತಾಲ್ಲೂಕುಗಳಲ್ಲಿ ಸಂಬಂಧಿಸಿದ ಇಲಾಖೆಯಿಂದ ಹಫ್ತಾ ವಸೂಲಿ ಮಾಡಿ ಈ ಅಕ್ರಮ ದಂದೆಗೆ ಪ್ರೋತ್ಸಾಹ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; ದಾಂಡೇಲಿ, ಹಳಿಯಾಳ, ರಾಮನಗರ ಮುಂತಾದ ಕಡೆ ಈ ಅವ್ಯವಹಾರವನ್ನು ತಡೆಗಟ್ಟಲು ಪೊಲೀಸ್ ಇಲಾಖೆ ನಿಷ್ಕಾಳಜಿ ಮಾಡಿದ್ದು, ಅನೇಕ ಬಡ ಕುಟುಂಬಗಳು ಬೀದಿಪಾಲಾಗಿರುವುದು ನಿಜವೇ ; ಸದರಿ ಅವ್ಯವಹಾರ ತಡೆಗಟ್ಟಲು ನಿಷ್ಕ್ರಯೋಜಕವಾದ ಅಧಿಕಾರಿಗಳ ಮೇಲೆ ಸೂಕ್ತ ತನಿಖೆ ಮಾಡಲಾಗುವುದೇ ;

(ಇ) ಹಾಗೂ ಅವರನ್ನು ಬೇರೆ ಕಡೆ ವರ್ಗಾವಣೆ ಮಾಡಿ ಆಗುತ್ತಿರುವ ಅಕ್ರಮ ವ್ಯವಹಾರಕ್ಕೆ ಕಡಿವಾಣ ಹಾಕಲಾಗುವುದೇ ? (ವಿವರ ನೀಡುವುದು)

## ನಗರ ಸಭೆ, ಪುರಸಭೆ ವ್ಯಾಪ್ತಿಯಲ್ಲಿ ವಿವಿಧ ಕೆಲಸ ಕಾರ್ಯಗಳಿಗೆ ಬಳಸಿಕೊಂಡ ಅನುದಾನದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೯ (೧೨೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ದಾಂಡೇಲಿ / ಹಳಿಯಾಳ ನಗರಸಭೆ, ಪುರಸಭೆ, ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ

೨೦೧೪–೧೫ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ವಿವಿಧ ಯೋಜನೆಯಡಿ ಬಂದಿರುವ ಅನುದಾನ ಎಷ್ಟು ; (ಅಭಿವೃದ್ಧಿಗೆ ತೊಡಗಿಸಿದ ವಿವರ ಶೀರ್ಷಿಕೆವಾರು ನೀಡುವುದು. ಜಿಲ್ಲಾವಾರು/ ತಾಲ್ಲೂಕುವಾರು ನೀಡುವುದು)

(ಆ) ನಗರಸಭೆ, ಪುರಸಭೆ, ವ್ಯಾಪ್ತಿಯಲ್ಲಿ ೨೦೧೪–೧೫ ರಿಂದ ೨೦೧೭–೧೮ರವರೆಗೆ ವಿವಿಧ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಬಳಕೆ ಮಾಡಿರುವ ಅನುದಾನ ಎಷ್ಟು ; (ವಿವರ ನೀಡುವುದು) ಕಾರ್ಯಕ್ರಮದ ವಿವರ, ದಿನಾಂಕ ಅದಕ್ಕೆ ಖರ್ಚು ಮಾಡಿದ ಅನುದಾನದ ಸವಿಸ್ತಾರ ವರದಿ ನೀಡುವುದು)

(ಇ) ನಗರಸಭೆ, ಪುರಸಭೆ, ವ್ಯಾಪ್ತಿಯಲ್ಲಿ ಅಧಿಕಾರಿ/ಇತರೇ ಕೆಲಸ ಕಾರ್ಯಗಳಿಗೆ ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವ ವಾಹನಕ್ಕೆ ಪ್ರತಿ ತಿಂಗಳು ಎಷ್ಟು ಅನುದಾನ ಬಳಕೆ ಮಾಡಿಕೊಳ್ಳಬಹುದು; (ವಿವರ ನೀಡುವುದು) ೨೦೧೫–೧೬ನೇ ಸಾಲಿನಿಂದ ೨೦೧೭–೧೮ರವರೆಗೆ ಬಳಸಿಕೊಂಡ ವಾಹನ, ಅದಕ್ಕೆ ನೀಡಿರುವ ಪ್ರತಿ ತಿಂಗಳ ವೆಚ್ಚದ (ವಿವರ ನೀಡುವುದು) ಸವಿಸ್ತಾರ ತಿಂಗಳವಾರು ವರದಿ ನೀಡುವುದು ;

(ಈ) ನಗರಸಭೆ/ಪುರಸಭೆ ವ್ಯಾಪ್ತಿಯಲ್ಲಿ ೨೦೧೪–೧೫ ರಿಂದ ೨೦೧೭–೧೮ರವರೆಗೆ ವಿವಿಧ ಕಾರ್ಯಕ್ರಮಗಳಿಗೆ ಬಳಸಿಕೊಂಡಿರುವ ದಿನಗೂಲಿ ನೌಕರರ ಕೆಲಸ ಹಾಗೂ ಅವರಿಗೆ ಬಟವಾಡೆ ಮಾಡಿದ ವೇತನ ಎಷ್ಟು ? (ತಿಂಗಳವಾರು, ಹೆಸರು, ಕೆಲಸ ನಿರ್ವಹಿಸಿದ ಸ್ಥಳ, ವೇತನ ಬಡವಾಡೆ ಮಾಡಿದ ಸವಿಸ್ತಾರ ವಿವರ ನೀಡುವುದು)

## ಸರ್ಕಾರಿ ವಾಹನದಲ್ಲಿ ಬೆಲೆ ಬಾಳುವ ಕಟ್ಟಿಗೆ ಅಕ್ರಮವಾಗಿ ಸಾಗಿಸಿದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೦ (೧೨೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆನರಾ ವೃತ್ತದ ಹಳಿಯಾಳ ವಿಭಾಗದ ಸಾಬ್ರಾಣಿ ವಲಯದಲ್ಲಿ ಬೆಲೆ ಬಾಳುವ ಸಾಗವಾನಿ ಮರದ ತುಂಡುಗಳು ಪೊಲೀಸ್ ವಾಹನದಲ್ಲಿ ಸಿಕ್ಕಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಗ್ಗೆ ಸಂಬಂಧಿಸಿದ ಇಲಾಖೆಯವರು ತನಿಖೆಯಲ್ಲಿ ಹಸ್ತಕ್ಷೇಪ ಮಾಡಿರುವುದು ನಿಜವೇ;

(ಇ) ಪ್ರಕರಣದಲ್ಲಿ ಶಾಮೀಲಾದ ಅಧಿಕಾರಿ ವರ್ಗದವರ ವಿವರ, ವಾಹನದ ವಿವರ ಹಾಗೂ ಈ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಗಾಂಜಾ, ಮಟ್ಕಾ ಹಾಗೂ ಖೋಟಾ ನೋಟಿನ ಜಾಲದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೧ (೧೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಶಿರಸಿ ತಾಲ್ಲೂಕಿನಲ್ಲಿ ಬಹಳ ದಿನಗಳಿಂದ ಖೋಟಾ–ನೋಟಿನ ಜಾಲ ಹಾಗೂ ಚಲಾವಣೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ಆತಂಕಕ್ಕೆ ಕಾರಣವಾಗಿದ್ದು, ಇದಲ್ಲದೇ ಶಿರಸಿ

ನಗರ ತುಂಬಾ ಅಮಲು ಮಿಶ್ರಿತ ಮಾತ್ರೆ ಇಂಜೆಕ್ಷನ್ ಹಾಗೂ ಔಷಧ ಮಾರಾಟ (ಗಾಂಜಾ) ಜಾಲ ಹರಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ವಿಷಯದಲ್ಲಿ ಪೊಲೀಸ್ ಇಲಾಖೆ ಇಲ್ಲಿಯವರೆಗೆ ಯಾವ ರೀತಿ ತನಿಖೆ ಮಾಡಿದೆ ; (ಸವಿಸ್ತಾರ ವರದಿ ನೀಡುವುದು)

(ಇ) ಈಗಾಗಲೇ ಜಿಲ್ಲೆಯಲ್ಲಿ ಬಹಳಷ್ಟು ಅನಧಿಕೃತ ಚಟುವಟಿಕೆ ನಡೆಯುತ್ತಿದ್ದರೂ ಪೊಲೀಸ್ ಇಲಾಖೆ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ ಈ ಕೃತ್ಯ ಮಾಡುತ್ತಿರುವವರಿಗೆ ಕಡಿವಾಣ ಹಾಕುವಲ್ಲಿ ಅಧಿಕಾರಿಗಳು ವಿಫಲವಾಗಿದ್ದಾರೆಯೇ ; ಈ ವಿಷಯಕ್ಕೆ ಸಂಬಂಧಿಸಿದಂತೆ ಎಷ್ಟು ಮಂದಿ ಆರೋಪಿತರನ್ನು ಇಲ್ಲಿಯುವರೆಗೆ ಬಂಧಿಸಲಾಗಿದೆ ಹಾಗೂ ಅವರಿಂದ ವಶಪಡಿಸಿಕೊಂಡ ವಸ್ತುಗಳ ವಿವರ ನೀಡುವುದು ;

(ಈ) ಹಳಿಯಾಳ ಪಟ್ಟಣದಲ್ಲಿ ರಾತ್ರಿ ವೇಳೆ ಜನ ವಸತಿ ಇರುವಂತಹ ಪ್ರದೇಶದಲ್ಲಿ ಮನೆಗೆ ನುಗ್ಗಿ ದರೋಡೆ ಮಾಡಿ ಮನೆಯಲ್ಲಿರುವ ಜನರಿಗೂ ಮಾರಣಾಂತಿಕ ಹಲ್ಲೆ ಮಾಡಿ ಹೋಗಿದ್ದರೂ ಇಲ್ಲಿಯವರೆಗೆ ಸಂಬಂಧಿಸಿದ ಇಲಾಖೆಯವರು ಯಾವುದೇ ರೀತಿಯಲ್ಲಿ ಕ್ರಮ ಕೈಗೊಂಡಿಲ್ಲದಿರುವುದಕ್ಕೆ ಕಾರಣಗಳೇನು ; (ಈ ಬಗ್ಗೆ ಸಂಬಂಧಿಸಿದ ಅಧಿಕಾರಿಯವರು ಇಲ್ಲಿಯವರೆಗೆ ಮಾಡಿರುವ ತನಿಖೆಯ ವಿವರ ನೀಡುವುದು)

(ಉ) ಈ ರೀತಿ ನಿಷ್ಕಾಳಜಿ ವಹಿಸುತ್ತಿರುವ ಪೊಲೀಸ್ ಅಧಿಕಾರಿಗಳನ್ನು ಕೂಡಲೇ ಬೇರೆ ಕಡೆ ವರ್ಗಾವಣೆ ಮಾಡಲಾಗುವುದೇ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲಸಿರುವ ವಲಸಿಗರಿಗೆ ಆಧಾರ್ ಕಾರ್ಡ್ ಮತ್ತು ಮತದಾರರ ಗುರುತಿನ ಚೀಟಿ ವಿತರಿಸುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೨ (೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲಸಿರುವ ವಲಸಿಗರಿಗೆ ಕಾನೂನುಬಾಹಿರವಾಗಿ ಆಧಾರ್‌ಕಾರ್ಡ್ ಹಾಗೂ ಮತದಾರರ ಗುರುತಿನ ಚೀಟಿಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಅಕ್ರಮವಾಗಿ ನೆಲೆಸಿರುವ ಎಷ್ಟು ಜನ ವಲಸಿಗರಿಗೆ ಈ ರೀತಿಯ ಕಾರ್ಡ್‌ಗಳನ್ನು ವಿತರಿಸಲಾಗಿರುತ್ತದೆ;

(ಇ) ಈ ರೀತಿಯ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

# ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ವಸತಿ ಸಂಕೀರ್ಣಗಳಲ್ಲಿನ ಪ್ಲಾಟ್‌ಗಳಿಗೆ ವಾಸಯೋಗ್ಯ ಪತ್ರ ನೀಡಿರುವ ಬಗ್ಗೆ

**ಶ್ರೀ ಲಹರ್‌ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩ (೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ರ ಏಪ್ರಿಲ್ ಮಾಹೆಯಿಂದ ೨೦೧೭ರ ಮಾರ್ಚ್‌ವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬೃಹತ್ ಕಟ್ಟಡಗಳಲ್ಲಿ ನಿರ್ಮಿಸಿರುವ ವಸತಿ ಸಂಕೀರ್ಣಗಳಲ್ಲಿರುವ ಎಷ್ಟು ಪ್ಲಾಟ್‌ಗಳಿಗೆ ಬಿ.ಬಿ.ಎಂ.ಪಿಯ ನಗರ ಯೋಜನೆಯಿಂದ ಮತ್ತು ೦೮ ವಲಯಗಳ ಮೂಲಕ ವಾಸ ಯೋಗ್ಯ ಪ್ರಮಾಣ ಪತ್ರ ನೀಡಲಾಗಿದೆ ;

(ಆ) ಈ ವಸತಿ ಸಂಕೀರ್ಣಗಳಲ್ಲಿರುವ ಪ್ಲಾಟ್‌ಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಸೇರಿಸಲಾಗಿದೆಯೇ ; ಇದರಿಂದ ಮಹಾನಗರ ಪಾಲಿಕೆಗೆ ಬರ ಬೇಕಾಗಿರುವ ತೆರಿಗೆಯ ಮೊತ್ತವೆಷ್ಟು ;

(ಇ) ಇದುವರೆವಿಗೂ ಈ ಪ್ಲಾಟ್‌ಗಳಿಂದ ವಸೂಲಾದ ತೆರಿಗೆಯ ಮೊತ್ತ ಎಷ್ಟು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0140/800 ಪ್ರತಿಗಳು/06–07–2017